ಕನ್ನಡ ದಿನಪತ್ರಿಕೆ
23 ಎಪ್ರಿಲ್ । ಮಂಗಳವಾರ
23 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 56 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26



## ಬಿಜೆಪಿ ತೊರೆದು ಕೈ ಸೇರ್ಪಡೆಯಾದ ಕೆ.ಪಿ. ನಂಜುಂಡಿ

ಬೆಂಗಳೂರು: ಲೋಕಸಭಾ ಚುನಾವಣೆಯ ಹೊಸ್ತಿಲಲ್ಲಿ ಪಕ್ಷಾಂತರ ಪರ್ವ ಕಾವೇರಿದ್ದು, ಈ ಪಟ್ಟಿಗೆ ಮತ್ತೊಂದು ಹೆಸರು ಸೇರ್ಪಡೆಯಾಗಿದೆ. ವಿಧಾನ ಪರಿಷತ್ ಸದಸ್ಯ ಕೆ.ಪಿ. ನಂಜುಂಡಿ ಬಿಜೆಪಿಗೆ ಗುಡ್ ಬೈ ಹೇಳಿ ಕಾಂಗ್ರೆಸ್ ಪಕ್ಷಕ್ಕೆ ಕಾಲಿಟ್ಟಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರೊಡನೆ ಮಾತುಕತೆ ನಡೆಸಿರುವ ಕೆ.ಪಿ. ನಂಜುಂಡಿ ಬಿಜೆಪಿ ತೊರೆಯಲು ನಿರ್ಧರಿಸಿದ್ದಾರೆ. ಇದರಿಂದ ಬಿಜೆಪಿಗೆ ಮತ್ತೊಂದು ಹೊಡೆತ ಬಿದ್ದಂತಾಗಿದೆ.

ವಿಶ್ವಕರ್ಮ ಸಮುದಾಯದ ಮುಖಂಡರೂ ಆಗಿರುವ ಕೆ.ಪಿ. ನಂಜುಂಡಿ ಲಕ್ಷ್ಮಿ ಜ್ಯುವೆಲರಿ ಮಾಲಿಕರಾಗಿದ್ದಾರೆ.

# ವಿಪಕ್ಷಗಳ ಇಂಡಿಯಾ ಒಕ್ಕೂಟವು ಭ್ರಷ್ಟರ ಮೈತ್ರಿಕೂಟವಾಗಿದೆ: ಜೆಪಿ ನಡ್ಡಾ

ಹುಬ್ಬಳ್ಳಿ: ಇದು ಕುಟುಂಬ ರಾಜಕಾರಣ ಮತ್ತು ಭ್ರಷ್ಟಾಚಾರದ ಮೈತ್ರಿಯೇ ಹೊರತು ಬೇರೇನೂ ಅಲ್ಲ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರು ಕಾಂಗ್ರೆಸ್ ಮತ್ತು ಇಂಡಿಯಾ ಮೈತ್ರಿಕೂಟದ ಇತರ ಪಕ್ಷದ ನಾಯಕರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಹುಬ್ಬಳ್ಳಿಯ ವಿದ್ಯಾನಗರದಲ್ಲಿ ಭಾನುವಾರ ನಡೆದ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, 'ಇಂಡಿಯಾ ಮೈತ್ರಿಕೂಟದ ಬಹುತೇಕ ನಾಯಕರು ಜಾಮೀನಿನ ಮೇಲೆ ಅಥವಾ ಜೈಲಿನಲ್ಲಿದ್ದಾರೆ. ರಾಹುಲ್ ಗಾಂಧಿ ಸೇ–ರಿದಂತೆ ಕಾಂಗ್ರೆಸ್ ನಾಯಕರಿಗೆ ದೇಶವಿರೋಧಿಗಳ ಜತೆ ಬೆರೆಯಲು ನಾಚಿಕೆಯಾಗುವುದಿಲ್ಲ' ಎಂದು ಹೇಳಿದರು.

'ದಕ್ಷಿಣ ಭಾರತವನ್ನು ಪ್ರತ್ಯೇಕ ರಾಷ್ಟ್ರ' ಮಾಡುವ ಹೇಳಿಕೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕ



ಡಿಕೆ ಸುರೇಶ್ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪಾಕ್ ಪರ ಘೋಷಣೆಗಳನ್ನು ಕೂಗುವವರನ್ನು ರಕ್ಷಿಸುತ್ತಿದ್ದಾರೆ.

ಸಿಎಂ ಅವರು ಇಂತಹ ಘಟನೆಗಳನ್ನು ಖಂಡಿಸುವುದಿಲ್ಲ. ಕಾಂಗ್ರೆಸ್ ಸುಳ್ಳುಗಾರರ ಪಕ್ಷ. ರಾಜ್ಯವು ತನ್ನ ಪಾಲಿನ ಹಣವನ್ನು ಪಡೆಯುತ್ತಿಲ್ಲ ಎಂದು ಅವರು ಆರೋಪಿಸುತ್ತಿದ್ದಾರೆ. ಆದರೆ, ಸತ್ಯವೆಂದರೆ ಕೇಂದ್ರ ಸರ್ಕಾರವು ಕಾಂಗ್ರೆಸ್ ಮಾಡಿದ್ದಕ್ಕಿಂತ ಸುಮಾರು ನಾಲ್ಕು ಪಟ್ಟು ಹೆಚ್ಚಿನ ಹಣವನ್ನು ಬಿಡುಗಡೆ ಮಾಡಿದೆ ಎಂದರು.

ನಾವು ಆರ್ಟಿಕಲ್ 370 ಅನ್ನು ತೆಗೆದುಹಾಕುವುದಾಗಿ ಭರವಸೆ ನೀಡಿದ್ದೇವೆ ಮತ್ತು ನಾವು ಅದನ್ನು ಮಾಡಿದ್ದೇವೆ. ರಾಮ ಮಂದಿರ ನಿರ್ಮಾಣದ ಭರವಸೆ ನೀಡಿದ್ದೆವು ಮತ್ತು ನಾವು ಅದನ್ನು ಮಾಡಿದ್ದೇವೆ. ಭಾರತವು 5ನೇ ಅತಿದೊಡ್ಡ ಆರ್ಥಿಕತೆ ಹೊಂದಿದ ರಾಷ್ಟ್ರವಾಗಿದೆ. ನಾವು ಮತ ಮತ್ತು ಅಧಿಕಾರಕ್ಕಾಗಿ ಭ್ರಷ್ಟಾಚಾರ ಮತ್ತು ತುಷ್ಟೀಕರಣ ರಾಜಕಾರಣದಲ್ಲಿ ತೊಡಗಿರುವ ಜನರನ್ನು ದೂರವಿಡಬೇಕು ಎಂದು ಅವರು ಹೇಳಿದರು.

ಹುಬ್ಬಳ್ಳಿಯಲ್ಲಿ ಭಾನುವಾರ ನಡೆದ ಸಾರ್ವಜನಿಕ ಸಭೆಯಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರನ್ನು ಪಕ್ಷದ ಮುಖಂಡರು ಸನ್ಮಾನಿಸಿದರು.

ನೇಹಾ ಹಿರೇಮಠ್ ಹತ್ಯೆ: ರಾಜ್ಯ ಸರ್ಕಾರ ಪ್ರಕರಣವನ್ನು ಸಿಬಿಐಗೆ ವಹಿಸಬೇಕು– ಜೆಪಿ ನಡ್ಡಾ

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಮುಂದಿನ ದಿನಗಳಲ್ಲಿ ಭಾರತವು ಮೂರನೇ ಅಗ್ರ ಆರ್ಥಿಕತೆ ಹೊಂದಿದ ದೇಶವಾಗಲಿದೆ ಎಂದ ಅವರು, ಕೇಂದ್ರ ಸರ್ಕಾರದ ಯೋಜನೆಗಳು ಮತ್ತು ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

## ಕೊನೆಗೂ ಬರಪರಿಹಾರ ಹಣ ನೀಡಲು ಒಪ್ಪಿಕೊಂಡ ಕೇಂದ್ರ ಸರ್ಕಾರ: ಬಿಜೆಪಿ ನಾಯಕರಿಗೆ ಬಾರಿ ಮುಖಭಂಗ



ನವದೆಹಲಿ: ರಾಜ್ಯಕ್ಕೆ ಬರ ಪರಿಹಾರ ನೀಡಲು ಕೇಂದ್ರ ಸರ್ಕಾರ ವಿಳಂಬ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದು, ಇದರ ಬೆನ್ನಲ್ಲೇ ಕೇಂದ್ರ ಸರ್ಕಾರ ಬರ ಪರಿಹಾರ ಬಿಡುಗಡೆ ಮಾಡಲು ಒಪ್ಪಿದೆ.

ರಾಜ್ಯ ಸರ್ಕಾರದ ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ಕರ್ನಾಟಕಕ್ಕೆ ಬರ ಪರಿಹಾರ ನಿಧಿ ಬಂದಿಲ್ಲ, ತಕ್ಷಣ ಬಿಡುಗಡೆ ಮಾಡುವಂತೆ ಕೇಂದ್ರಕ್ಕೆ ನಿರ್ದೇಶನ ನೀಡಿದೆ. ಈ ವೇಳೆ ಕೇಂದ್ರ ಸರ್ಕಾರದ ಪರ ಅಟಾರ್ನಿ ಜನರಲ್ ವೆಂಕಟರಮಣಿ, ಬರ ಪರಿಹಾರ ಸಂಬಂಧ ಚುನಾವಣಾ ಆಯೋಗದ ಅನುಮತಿ ಕೇಳಿದ್ದೇವೆ. ಕೆಲವೇ ದಿನಗಳಲ್ಲಿ ಸಮಸ್ಯೆ ಬಗೆಹರಿಯಬಹುದು. ಸೋಮವಾರದ ಒಳಗೆ ಬರ ಪರಿಹಾರ ಬಿಡುಗಡೆ ಮಾಡುತ್ತೇವೆ ಎಂದು ಹೇಳಿದರು.

ಇದೇ ವೇಳೆ ಹಿರಿಯ ವಕೀಲರ ಅಲಭ್ಯತೆ ಹಿನ್ನೆಲೆಯಲ್ಲಿ ವಿಚಾರಣೆಯನ್ನು ಮುಂದೂಡುವಂತೆ ರಾಜ್ಯ ಸರ್ಕಾರದ ಪರ ವಕೀಲರು ಮನವಿ ಮಾಡಿದರು. ಈ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್, ಅರ್ಜಿ ವಿಚಾರಣೆಯನ್ನು ಏಪ್ರಿಲ್ 29ಕ್ಕೆ ಮುಂದೂಡಿದೆ.

## ಒಂದೇ ಕುಟುಂಬದ ನಾಲ್ವರ ಹತ್ಯೆ ಕೇಸ್: 8 ಆರೋಪಿಗಳು ಅರೆಸ್ಟ್



ಗದಗ: ಜಿಲ್ಲೆಯ ಜನರು ಬೆಚ್ಚಿ ಬೆಚ್ಚಿ ಬೀಳುವಂತೆ ಮಾಡಿದ್ದ ಒಂದೇ ಕುಟುಂಬದ ನಾಲ್ವರ ಹತ್ಯೆ ಪ್ರಕರಣ. ಈ ಪ್ರಕರಣ–ಕ್ಕೆ ಕಾರಣವಾದಂತ 8 ಆರೋಪಿಗಳನ್ನು ಪೊಲೀಸರು ಎಡೆಮುರಿ ಕಟ್ಟಿ ಬಂದಿಸಿದ್ದಾರೆ.

ಈ ಕುರಿತಂತೆ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದಂತ ಗದಗ ಎಸ್ಪಿ ನೇಮಗೌಡ ಅವರು, ಗದಗ ನಗರ ಸಭೆ ಉಪಾಧ್ಯಕ್ಷೆ ಪುತ್ರ ಸೇರಿದಂತೆ ಒಂದೇ ಕುಟುಂಬದ ನಾಲ್ವರು ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತ ಘಟನೆ ನಡೆದ 48 ಗಂಟೆಯಲ್ಲಿ ಪೊಲೀಸರು 8 ಆರೋಪಿಗಳನ್ನು ಬಂಧಿಸಿರೋದಾಗಿ ತಿಳಿಸಿದರು.

ಆಸ್ತಿಯ ಕಲಹದಿಂದಾಗಿ ಈ ಕೊಲೆ ನಡೆದಿದೆ. ಈ ನಾಲ್ವರ ಹತ್ಯೆಗೆ ಮಗನೇ ಸುಫಾರಿ ಕೊಟ್ಟಿರೋದಾಗಿ ತನಿಖೆಯಲ್ಲಿ ತಿಳಿದು ಬಂದಿದೆ. ಈ ಹತ್ಯೆ ಸಂಬಂಧ ಪ್ರಮುಖ ಆರೋಪಿ ವಿನಾಯಕ್ ಬಾಕಳೆ, ಫೈರೋಜ್ ಖಾಜಿ, ಸುಲ್ತಾನ್ ಶೇಖರ್, ಸಾಹಿಲ್, ಸೋಹೇಲ್, ಮಹೇಶ್ ಸಾಳೊಂಕೆ, ವಾಹಿದ್ ಬೆಪಾರಿ ಸೇರಿದಂತೆ 8 ಮಂದಿ ಆರೋಪಿಗಳನ್ನು ಬಂಧಿಸಿರೋದಾಗಿ ತಿಳಿಸಿದರು.

# ದಲಿತ ಯುವಕನ ಹತ್ಯೆ



ಯಾದಗಿರಿ: ಯಾದಗಿರಿಯ ಶಗಾಪುರಪೇಟೆ ಬಡಾವಣೆಯಲ್ಲಿ ಮುಸ್ಲಿಂ ಯುವಕನೊಬ್ಬ ದಲಿತ ಯುವಕನ ಹತ್ಯೆ ಮಾಡಿದ್ದಾನೆ. ರಾಕೇಶ್ (22) ಕೊಲೆಯಾದ ಯುವಕ. ರೊಟ್ಟಿ ಕೇಂದ್ರದ ಸದಸ್ಯ ಫಯಾಜ್ ಸೇರಿದಂತೆ ನಾಲ್ವರು ಕೃತ್ಯ ಎಸಗಿದ್ದಾರೆ.

ರಾತ್ರಿ ರೊಟ್ಟೆ ಕೇಂದ್ರಕ್ಕೆ ರೊಟ್ಟಿ ತರಲು ರಾಕೇಶ್ ಹೋಗಿದ್ದ. ಇದೇ ವೇಳೆ ರೊಟ್ಟಿ ಕೇಂದ್ರದ ಫಯಾಜ್ ಜೊತೆ ಕಿರಿಕ್ ಆಗಿದೆ. ರಾಕೇಶ್ ಮನೆಗೆ ಮರಳಿದ ನಂತರ ಮತ್ತೆ ಜಗಳವಾಗಿದ್ದು, ಈ ವೇಳೆ ರಾಕೇಶ್ನ ಮರ್ಮಾಂಗಕ್ಕೆ ಒದ್ದು ಕೊಲೆ ಮಾಡಿರುವ ಆರೋಪ ಮಾಡಲಾಗಿದೆ.

ಇನ್ನು ಆರೋಪಿ, ಕೊಲೆಯಾದ ಯುವಕನ ಕುಟುಂಬದ ನಡುವೆ ನಿನ್ನೆ ರಾತ್ರಿ 11 ಗಂಟೆ ಘಟನೆ ಕೊಲೆ ನಂತರ ಸಂಧಾನ ಮಾತುಕತೆ ಮಾಡಲಾಗಿದೆ. ಇದಾದ ನಂತರ ಬಿಜೆಪಿ ಮುಖಂಡರ ನೆರವಿನಲ್ಲಿ ಕೊಲೆಯಾದ ರಾಕೇಶ್ ತಾಯಿಯಿಂದ ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ. ಘಟನಾ ಸ್ಥಳಕ್ಕೆ ಯಾದಗಿರಿ ಎಸ್ಪಿ ಸಂಗೀತಾ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ.

ಪೊಲೀಸರು ಸ್ಥಳಕ್ಕೆ ಬಂದ ನಂತರ ರಾಕೇಶ್ ಶವ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ. ಯಾದಗಿರಿ ಜಿಲ್ಲಾಸ್ಪತ್ರೆಯ ಶವಾಗಾರದಲ್ಲಿ ಮರಣೋತ್ತರ ಪರೀಕ್ಷೆ ಮಾಡಲಾಗಿದೆ. ಯಾದಗಿರಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ

# ನೇಹಾ ಹತ್ಯೆ ಕೇಸ್ 'ಸಿಐಡಿ'ಗೆ ವಹಿಸಿದ ರಾಜ್ಯ ಸರ್ಕಾರ

ಶಿವಮೊಗ್ಗ: ನೇಹಾ ಹತ್ಯೆ ಕೇಸ್ ಸಿಐಡಿಗೆ ವಹಿಸಲಿದೆ ಅಂತ ಸಿಎಂ ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ಶಿವಮೊಗ್ಗದ ವಿಮಾನ ನಿಲ್ದಾಣದಲ್ಲಿ ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಪ್ರಕರಣವನ್ನು ಸಿಐಡಿಗೆ ವಹಿಸಲಾಗುವುದು ಅಂತ ಅವರು ಇದೇ ವೇಳೆ ಅವರು ಹೇಳಿದರು.


ಇನ್ನೂ ಶೀಘ್ರದಲ್ಲಿ ನೇಹಾಳ ಹತ್ಯೆ ಕೇಸ್ ಅನ್ನು ಸಿಐಡಿ ಅಧಿಕಾರಿಗಳು ನಡೆಸಲಿದ್ದು, ಈ ಬಗ್ಗೆ ಆದೇಶವನ್ನು ಪೊಲೀಸ್ ಹಿರಿಯ ಅಧಿಕಾರಿಗಳು ಇಂದು ಸಂಜೆಯೊಳಗೆ ಹೊರಡಿಸಲಿದ್ದಾರೆ ಎನ್ನಲಾಗಿದೆ. ಇನ್ನೆರೆಡು ದಿನದಲ್ಲಿ ಹತ್ಯೆಗೆ ಸಂಬಂಧಪಟ್ಟಂತೆ ಸ್ಥಳೀಯ ಪೊಲೀಸ್ ಅಧಿಕಾರಿಗಳಿಂದ ಸಿಐಡಿಗಳು ಮಾಹಿತಿಯನ್ನು ಪಡೆದುಕೊಂಡು ಬಳಿಕ ತನಿಖೆಯನ್ನು ಶುರುಮಾಡಲಿದ್ದಾರೆ. ಸಿಐಡಿಯಲ್ಲಿ ರಾಜ್ಯದ ಹಿರಿಯ ಪೊಲೀಸ್ ಅಧಿಕಾರಿಗಳೇ ಇರಲಿದ್ದಾರೆ.

ಈ ನಡುವೆ , ನೇಹಾಳನ್ನು 9 ಅಲ್ಲ




ಬದಲಾಗಿ 14 ಬಾರಿ ಚುಚ್ಚಿ ಕೊಂದಿದ್ದಾನೆ. ನೇಹಾ ಹಿರೇಮಠ ದೇಹದ ಮೇಲೆ 14 ಗಾಯಗಳ ಗುರುತು ಪತ್ತೆಯಾಗಿದೆ ಎನ್ನಲಾಗಿದೆ. ಇದಲ್ಲದೇ ಕುತ್ತಿಗೆಗೆ ಹಲವು ಬಾರಿ ಇರಿದಿದ್ದರಿಂದ ರಕ್ತನಾಳ ತುಂಡಾಗಿ ವಿಪರೀತ ರಕ್ತಸ್ರಾವವಾಗಿದೆ, ಹೀಗಾಗಿ ರಕ್ತಸ್ರಾವದಿಂದಲೇ ಆಕೆ ಸಾವನ್ನಪ್ಪಿದ್ದಾಳೆ ಎನ್ನುವ ಆಘಾತಕಾರಿ ಮಾಹಿತಿ ಹೊರಬಿದಿದ್ದೆ. ಏ.18 ರ ಗುರುವಾರ ಸಂಜೆ 4.45ರ ಸುಮಾರಿಗೆ ಆರೋಪಿ ಫಯಾಜ್ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಕಾಂಗ್ರೆಸ್ ಸದಸ್ಯರಾದ ನಿರಂಜನ್ ಹಿರೇಮಠ್ ಅವರ ಪುತ್ರಿ, ಬಿವಿಬಿ ಕಾಲೇಜು ವಿದ್ಯಾರ್ಥಿನಿ ನೇಹಾ ಹತ್ಯೆ ಮಾಡಿದನ್ನು. ಸದ್ಯ ಆರೋಪಿ ಫಯಾಜ್ ನ್ಯಾಯಾಂಗ ಬಂಧನಲ್ಲಿದ್ದಾನೆ.

### ಸಿಎಂ ಸಿದ್ದು ನಿರ್ಧಾರ ಸ್ವಾಗತಿಸಿದ ನಿರಂಜನ ಹಿರೇಮಠ



ಹುಬ್ಬಳ್ಳಿ: ನೇಹಾ ಹಿರೇಮಠ ಕೊಲೆ ಪ್ರಕರಣದ ತನಿಖೆಯನ್ನು ಸಿಐಡಿಗೆ ವಹಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೊರಡಿಸಿರುವ ಆದೇಶವನ್ನು ಯುವತಿಯ ತಂದೆ ನಿರಂಜನ ಹಿರೇಮಠ ಸ್ವಾಗತಿಸಿದ್ದಾರೆ.

## ನೀತಿ ಸಂಹಿತೆ ಉಲ್ಲಂಘಿಸಿ ಡಿಸಿಎಂಗೆ ಊಟ ಬಡಿಸಿದ್ದ ಶಿಕ್ಷಕ ಅಮಾನತು




ರಾಯಚೂರು: ಚುನಾವಣೆ ನೀತಿ ಸಂಹಿತೆ ಉಲ್ಲಂಘಿ–ಸಿದ ಆರೋಪದ ಮೇಲೆ ಶಿಕ್ಷಕ ಕೆ. ರಾಮು ಅವರನ್ನು ಜಿಲ್ಲಾ ಚುನಾವಣಾ ಅಧಿಕಾರಿಯಾಗಿರುವ ಚಂದ್ರಶೇಖರ ನಾಯಕ್ ಭಾನುವಾರ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ.

ಬೆಂಗಳೂರಿನ ಕೆ.ಪಿ. ನಂಜುಂಡಿ ಅವರ ನಿವಾಸಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇತ್ತೀಚೆಗೆ ಭೇಟಿ ನೀಡಿ ಉಪಹಾರ ಸೇವಿಸುತ್ತಿದ್ದರು. ಆಗ ಶಿಕ್ಷಕ ಕೆ. ರಾಮು ಊಟ ಬಡಿಸುತ್ತಿರುವ ಫೋಟೋ ಮತ್ತು ವಿಡಿಯೋ ವೈರಲ್ ಆಗಿತ್ತು.

ಈ ಕುರಿತಾದ ದೂರು ಆಧರಿಸಿ ನೋಡಲ್ ಅಧಿಕಾ–ರಿಗಳು ಪರಿಶೀಲನೆ ನಡೆಸಿದ್ದರು. ಸರ್ಕಾರಿ ನೌಕರನಾಗಿ ಸರ್ಕಾರಿ ಕೆಲಸದಲ್ಲಿ ನಿರ್ಲಕ್ಷ್ಯ ತೋರಿರುವುದು, ಅನುಮತಿ ಪಡೆದುಕೊಳ್ಳದೆ ಕೇಂದ್ರ ಸ್ಥಾನ ಬಿಟ್ಟ ಕರ್ತವ್ಯಲೋಪದ ಮೇಲೆ ರಾಮು ಅವರನ್ನು ಜಿಲ್ಲಾ ಚುನಾವಣಾ ಅಧಿಕಾರಿ ಅಮಾನತು ಮಾಡಿದ್ದಾರೆ.

# ಲೋಕಸಭಾ ಚುನಾವಣೆ: 8 ಅಭ್ಯರ್ಥಿಗಳು ನಾಮಪತ್ರ ವಾಪಸ್

## ಅಂತಿಮ ಕಣದಲ್ಲಿ 13 ಅಭ್ಯರ್ಥಿಗಳು: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ

ನಾಮಪತ್ರ ವಾಪಸ್ ಪಡೆದ ಅಭ್ಯರ್ಥಿಗಳ ವಿವರ:
1. ಹಣಮಂತ ಶಿವಪ್ಪ ನಾಗನೂರ (ಪಕ್ಷೇತರ)
2. ಈಶ್ವರ ಚಿಕ್ಕನರಗುಂದ (ಪಕ್ಷೇತರ)
3. ದೊಡ್ಡಪ್ಪ ಈರಪ್ಪಾ ದೊಡಮನಿ (ಪಕ್ಷೇತರ)
4. ಭಾರತಿ ಬೈಲಪ್ಪ ನೀರಲಕೇರಿ (ಪಕ್ಷೇತರ)
5. ಸಾಗರ ಪಾಟೀಲ (ಪಕ್ಷೇತರ)
6. ಮಗದುಮ್ ಇಸ್ಮಾಯಿಲ್ ಮಗದುಮ್ (ಪಕ್ಷೇತರ)
7. ಮಹಾಂತೇಶ ಬಿ ನಿರ್ವಾಣಿ (ಪಕ್ಷೇತರ)
8. ಮಹಾಂತೇಶ ಗೌಡರ (ಪಕ್ಷೇತರ)

ಅಂತಿಮವಾಗಿ ಕಣದಲ್ಲಿ ಉಳಿದ ಅಭ್ಯರ್ಥಿಗಳು:
1. ಮಲ್ಲಪ್ಪ ಚೌಗಲಾ (ಉತ್ತಮ ಪ್ರಜಾಕೀಯ ಪಕ್ಷ)
2. ಜಗದೀಶ ಶೆಟ್ಟರ್ (ಬಿಜೆಪಿ)
3. ಬಸಪ್ಪ ಗುರುಸಿದ್ದಪ್ಪ ಕುಂಬಾರ (ಕರ್ನಾಟಕ ರಾಷ್ಟ್ರ ಸಮಿತಿ)
4. ಮೃಣಾಲ ಹೆಬ್ಬಾಳಕರ (ಕಾಂಗ್ರೆಸ್ ಪಕ್ಷ)
5. ರವಿ ಪಡಸಲಗಿ (ಪಕ್ಷೇತರ)
6. ಅಶೋಕ ಅಪ್ಪುಗೋಳ (ಬಹುಜನ ಸಮಾಜ ಪಾರ್ಟಿ)
7. ಪುಂಡಲೀಕ ಇಟ್ನಾಳ (ಪಕ್ಷೇತರ)
8. ಅಶೋಕ ಪಾಂಡಾಪ್ಪಾ ಹಣಜಿ (ಪಕ್ಷೇತರ)
9. ಲಕ್ಷ್ಮಣ ಜಡಗಣ್ಣನವರ (ಎಸ್.ಯು.ಸಿ.ಐ.ಸಿ)
10. ಮಹಾದೇವ ಪಾಟೀಲ (ಪಕ್ಷೇತರ)
11. ನಿತಿನ ಅಶೋಕ ಮಹಾಡಗುತ (ಪಕ್ಷೇತರ)
12. ಅಶ್ಫಕ್ ಅಹಮದ ಉಸ್ತಾದ (ಪಕ್ಷೇತರ)
13. ವಿಜಯ ಮೇತ್ರಾಣಿ (ಅಖಿಲ ಭಾರತೀಯ ಹಿಂದೂ ಮಹಾಸಭಾ).

ಬೆಳಗಾವಿ: 02–ಬೆಳಗಾವಿ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿ ಒಟ್ಟು 21 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು, ನಾಮಪತ್ರ ಹಿಂಪಡೆಯಲು ಕೊನೆಯ ದಿನಾಂಕವಾದ ಸೋಮವಾರ (ಏ.22) ಒಟ್ಟು 8 ಅಭ್ಯರ್ಥಿಗಳು ತಮ್ಮ ನಾಮಪತ್ರವನ್ನು ವಾಪಸ್ ಪಡೆದಿರುವುದರಿಂದ ಅಂತಿಮ ಕಣದಲ್ಲಿ ಒಟ್ಟು 13 ಅಭ್ಯರ್ಥಿಗಳು ಉಳಿದಿರುತ್ತಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

## ಬೈಲಹೊಂಗಲ: ಹಳ್ಳ ಹೂಳೆತ್ತುವ ವೇಳೆ ಹೃದಯಘಾತದಿಂದ ನರೇಗಾ ಕಾರ್ಮಿಕ ಸಾವು

ಬೈಲಹೊಂಗಲ: ನರೇಗಾ ಯೋಜನೆಯ ಹಳ್ಳ ಹೂಳೆತ್ತುವ ಕಾಮಗಾರಿ ವೇಳೆ ಕೂಲಿ ಕಾರ್ಮಿಕರೊಬ್ಬರು ಹೃದಯಾಘಾತದಿಂದ ಸ್ಥಳದಲ್ಲಿಯೇ ಸಾವನ್ನಪ್ಪಿರುವ ಘಟನೆ ಬೈಲಹೊಂಗಲ ತಾಲೂಕಿನ ವಕ್ಕುಂದ ಗ್ರಾಮದಲ್ಲಿ ಸೋಮವಾರ ನಡೆದಿದೆ.

ಮಲ್ಲೇಶ ಲಕ್ಷ್ಮಣ ಸಂಬರಗಿ (55) ಮೃತ ಕಾರ್ಮಿಕ. ಗ್ರಾಮದಲ್ಲಿ ನರೇಗಾ ಯೋಜನೆಯ ಹಳ್ಳ ಹೂಳೆತ್ತುವ ಕಾಮಗಾರಿಯಲ್ಲಿ ಕೂಲಿ ಮಾಡುತ್ತಿದ್ದರು. ಆಗ ತೀವ್ರ ಹೃದಯಾಘಾತ ಸಂಭವಿಸಿದೆ. ಘಟನಾ ಸ್ಥಳಕ್ಕೆ ತಾಲ್ಲೂಕು ಪಂಚಾಯ್ತಿ ಸಹಾಯಕ ನಿರ್ದೇಶಕ ವಿಜಯ ಪಾಟೀಲ, ಪಿಡಿಓ ವಿಜಯಲಕ್ಷ್ಮೀ ಆನಿಗೋಳ, ಗ್ರಾಮ ಪಂಚಾಯಿ ಸದಸ್ಯರು ಭೇಟಿ ನೀಡಿ ಮೃತ ಕುಟುಂಬಸ್ಥರಿಗೆ ಸಾಂತ್ವನ ತಿಳಿಸಿ ಸರ್ಕಾರದಿಂದ ಬರುವ ಸಹಾಯಧನ ಕಲ್ಪಿಸಿಕೊಡುವುದಾಗಿ ಭರವಸೆ ನೀಡಿದರು. ಮೃತ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು.

## 'ನಾಮಪತ್ರ' ಹಿಂಪಡೆಯದೇ ಶಿವಮೊಗ್ಗದಲ್ಲಿ ಬಂಡಾಯ ಅಭ್ಯರ್ಥಿಯಾಗಿ ಕಣದಲ್ಲಿ ಉಳಿದ 'ಕೆ.ಎಸ್ ಈಶ್ವರಪ್ಪ'



ಶಿವಮೊಗ್ಗ: ಮೇ 7ರಂದು ನಡೆಯಲಿರುವ ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಹಿರಿಯ ನಾಯಕ ಕೆ.ಎಸ್.ಈಶ್ವರಪ್ಪ ಕಣದಲ್ಲಿ ಉಳಿಯುವ ಮೂಲಕ ಪಕ್ಷದ ವಿರುದ್ಧ ಬಂಡಾಯದ ಸಮರಕ್ಕೆ ಸನ್ನದ್ಧರಾಗಿದ್ದೇನೆಂಬ ಸಂದೇಶವನ್ನು ಮಾಜಿ ಸಿಎಂ ಯಡಿಯೂರಪ್ಪ ಕುಟುಂಬ ಮತ್ತು ಬಂದ ಬಿಜೆಪಿ ಹೈಕಮಾಂಡ್ ಗೆ ರವಾನಿಸಿದ್ದಾರೆ.

ನಾಮಪತ್ರ ಹಿಂತೆಗೆತಕ್ಕೆ ಇಂದು ಅಂತಿಮ ದಿನವಾಗಿದ್ದು ಈಶ್ವರಪ್ಪ ನಾಮಪತ್ರ ಹಿಂತೆದುಕೊಂಡಿಲ್ಲ. ಇಂದು ಸಹ ಈಶ್ವರಪ್ಪನವರು ಯಡಿಯೂರಪ್ಪ ಕುಟುಂಬದ ವಿರುದ್ಧ ತಮ್ಮ ಪ್ರಚಾರ ಸಭೆಗಳಲ್ಲಿ ವಾಗ್ದಾಳಿ ನಡೆಸಿದ್ದಾರೆ.

2013 ರ ವಿಧಾನಸಭೆ ಚುನಾವಣೆಯಲ್ಲಿ ಯಡಿಯೂರಪ್ಪ ಕೆಜೆಪಿ ಕಟ್ಟಿ ಅದರಿಂದ ರುದ್ರೇಗೌಡರನ್ನು ಕಣಕ್ಕಿಳಿಸಿ ಈಶ್ವರಪ್ಪ ಸೋಲಿಗೆ ಕಾರಣರಾಗಿದ್ದರು. ಈಗ ಈಶ್ವರಪ್ಪ ಬಿಜೆಪಿ ಅಧಿಕೃತ ಅಭ್ಯರ್ಥಿ ಹಾಗೂ ಯಡಿಯೂರಪ್ಪ ಪುತ್ರ ರಾಘವೇಂದ್ರರನ್ನು ಪರಾಭವಗೊಳಿಸಿ ಸೇಡು ತೀರಿಸಿಕೊಳ್ಳಲು ಮುಂದಾಗಿದ್ದಾರೆ.

ಶಿವಮೊಗ್ಗ ಲೋಕಸಭಾ ಚುನಾವಣೆಯಲ್ಲಿ ಅಂತಿಮ ಕಣದಲ್ಲಿ 23 ಅಭ್ಯರ್ಥಿಗಳು: ಶಿವಮೊಗ್ಗ ಲೋಕಸಭಾ ಮತಕ್ಷೇತ್ರದ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಏ.22 ಉಮೇದುವಾ–ರಿಕೆ ಹಿಂಪಡೆಯಲು ಕಡೆಯ ದಿನವಾಗಿದ್ದು, ಜಿಲ್ಲೆಯಲ್ಲಿ ಚುನಾವಣೆ ಎದುರಿಸಲು ಅಂತಿಮವಾಗಿ 23 ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ.

## ಸಂಸ್ಕಾರ ಕಲಿತು ರಾಜಕೀಯ ಮಾಡಿ: ಮೃಣಾಲ್ ಹೆಬ್ಬಾಳಕರಗೆ ಮಂಗಲಾ ಅಂಗಡಿ ತಾಕೀತು



ಬೆಳಗಾವಿ: 'ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಅವರು ಮೊದಲು ಹಿರಿಯರಿಗೆ ಗೌರವ ಕೊಟ್ಟು ಮಾತನಾಡುವುದನ್ನು ಕಲಿಯಬೇಕು. ನಂತರ ರಾಜಕೀಯ ಮಾಡಬೇಕು' ಎಂದು ಸಂಸದೆ ಮಂಗಲಾ ಅಂಗಡಿ ಕಿಡಿ ಕಾರಿದರು.

ನಗರದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ನನ್ನ ಭಾವಚಿತ್ರ ಅಳವಡಿಸಿ ಒಂದು ಪೋಸ್ಟನ್ನು ಮೃಣಾಲ್ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದಾರೆ. 'ಬೆಳಗಾವಿಗೆ ಇವರು ಏನೂ ಮಾಡಿಲ್ಲ, ನಾಚಿಕೆ ಆಗಬೇಕು' ಎಂಬ ಪದ ಬಳಸಿದ್ದಾರೆ. ಅವರು ಇನ್ನೂ ಚಿಕ್ಕ ಹುಡುಗ. ರಾಜಕೀಯ ಮಾಡಲು ಸಾಕಷ್ಟು ವಯಸ್ಸಿದೆ. ಆದರೆ, ದೊಡ್ಡವರ ಬಗ್ಗೆ ಹೇಗೆ ಮಾತನಾಡಬೇಕು ಎಂಬ ಸಂಸ್ಕಾರ ಕಲಿಯಬೇಕು' ಎಂದರು.

'ಲಕ್ಷ್ಮಿ ಹೆಬ್ಬಾಳಕರ ಆರೋಪಿಸಿದರೆ ಸಹಿಸಿಕೊಳ್ಳಬಹುದು. ಆದರೆ, ಅವರ ಮಗ ಕೂಡ ಅವಾಚ್ಯ ಪದ ಬಳಸಿ ಮಾತನಾಡಿದರೆ ಸಹಿಸುವುದು ಹೇಗೆರೂ ಅವರಂತೆ ನಾನು ಮಾತನಾಡುವುದಿಲ್ಲ. ನನ್ನ ತಾಯಿ ನನಗೆ ಸಂಸ್ಕಾರ ಕಲಿಸಿದ್ದಾರೆ' ಎಂದರು.

'ರೂ 1,100 ಕೋಟಿಯ ಸ್ಮಾರ್ಟ್ ಸಿಟಿ ಮಾಡಿದ್ದೇವೆ. ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಮಾಡಿದ್ದೇವೆ. ಈಗ ಹೊಸ ಕಟ್ಟಡವೂ ಮಂಜೂರಾಗಿದೆ. ಶಿಕ್ಷಣಕ್ಕಾಗಿ ಎರಡು ಹೆಚ್ಚುವರಿ ಕೇಂದ್ರೀಯ ವಿಶ್ವವಿದ್ಯಾಲಯ ನಿರ್ಮಿಸಿದ್ದೇವೆ. ನಾನೊಬ್ಬಳೇ 2.73 ಲಕ್ಷ ಕುಟುಂಬಗಳಿಗೆ ಪಿಎಂ ಮುದ್ರಾ ಯೋಜನೆ ಅಡಿ ರೂ1,555 ಕೋಟಿ ಸಾಲ ಕೊಡಿಸುವ ಕೆಲಸ ಮಾಡಿದ್ದೇನೆ. 1.89 ಲಕ್ಷ ಕುಟುಂಬಗಳಿಗೆ ರಿಯಾಯಿತಿ ಗ್ಯಾಸ್ ಕೊಟ್ಟಿದ್ದೇವೆ' ಎಂದು ತಿಳಿಸಿದರು.

'ಸುರೇಶ ಅಂಗಡಿ ಅವರು 17 ವರ್ಷಗಳಲ್ಲಿ ರೂ16,495 ಕೋಟಿ ವೆಚ್ಚದ ಕಾಮಗಾರಿ ಮಾಡಿಸಿದ್ದಾರೆ. ರೂ210 ಕೋಟಿಯಲ್ಲಿ ರೈಲ್ವೆ ನಿಲ್ದಾಣ ಮೇಲ್ದರ್ಜೆಗೆ, ವಿಮಾನ ನಿಲ್ದಾಣ ಎರಡನೇ ಟರ್ಮಿನಲ್, ಪಾಸ್‌ಪೋರ್ಟ್ ಕಚೇರಿ, ರೂ927 ಕೋಟಿ ವೆಚ್ಚದ ರೈಲು ಮಾರ್ಗ, ರೂ100 ಕೋಟಿಯಲ್ಲಿ ನಾಲ್ಕು ಮೇಲ್ಸೇತುವೆ, ರೂ3600 ಕೋಟಿ ವೆಚ್ಚದಲ್ಲಿ ರೈಲ್ವೆ ಡಬ್ಲಿಂಗ್ ಕಾಮಗಾರಿ, ರಿಂಗ್ ರಸ್ತೆ ಮಂಜೂರು ಎಲ್ಲ ಯಾರು ಮಾಡಿದ್ದಾರೆ. ನೀವೇನು ಕಣ್ಣು ಮುಚ್ಚಿಕೊಂಡು ಕುಳಿತಿದ್ದೀರಾ' ಎಂದರು. 'ಕೊರೊನಾ ದಿನಗಳಲ್ಲೂ ಸುರೇಶ ಅಂಗಡಿ ಜನರ ಮಧ್ಯೆ ನಿಂತು ಕೆಲಸ ಮಾಡಿದರು. ಜನ ಸೇವೆಗಾಗಿ ತಮ್ಮ ಪ್ರಾಣ ಬಿಟ್ಟರು. ಆಗ ಮೃಣಾಲ್ ಎಲ್ಲಿದ್ದರು' ಎಂದು ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಅನಿಲ ಬೆನಕೆ ಪ್ರಶ್ನಿಸಿದರು. ಬಿಜೆಪಿ ನಗರ ಘಟಕದ ವಕ್ತಾರ ಹಣಮಂತ ಕೊಂಗಾಲಿ ಇದ್ದರು.

# ಬರ ನಿರ್ವಹಣೆ ಕಾನೂನು ಸಮರಕ್ಕೆ ಜಯ: ಸಚಿವ ಕೃಷ್ಣಭೈರೇಗೌಡ

ನವದೆಹಲಿ: ಕರ್ನಾಟಕ ರಾಜ್ಯಕ್ಕೆ ಬರ ನಿರ್ವಹಣೆ ಅನುದಾನ ಪಾವತಿ ವಿಚಾರವಾಗಿ ಒಂದು ವಾರದೊಳಗೆ ನಿರ್ಧಾರ ತೆಗೆದುಕೊಳ್ಳುತ್ತೇವೆ. ಇದಕ್ಕೆ ಸಂಬಂಧಪಟ್ಟಂತಹ ಪೂರ್ವಾನುಮತಿಗಳನ್ನು ಚುನಾವಣಾ ಆಯೋಗಗಳಿಂದ ಪಡೆಯಲಾಗಿದೆ ಎಂದು ಕೇಂದ್ರ ಸರ್ಕಾರ ಸುಪ್ರೀಂಕೋರ್ಟ್ಗೆ ಪ್ರಮಾಣಪತ್ರ ಸಲ್ಲಿಸಿದ್ದು, ರಾಜ್ಯಸರ್ಕಾರದ ಕಾನೂನು ಸಮರಕ್ಕೆ ಜಯ ಸಿಕ್ಕಿದೆ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ತಿಳಿಸಿದ್ದಾರೆ.

ರಾಜ್ಯದಲ್ಲಿ 223ಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಬರಪರಿಸ್ಥಿತಿ ಇದೆ. ಪರಿಹಾರ ನೀಡುವಂತೆ



ಕಳೆದ ಸೆಪ್ಟೆಂಬರ್ನಲ್ಲಿ ರಾಜ್ಯಸರ್ಕಾರ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿ 17,400 ಕೋಟಿ ರೂ.ಗಳ ಆರ್ಥಿಕ ನೆರವಿಗೆ ಮನವಿ ಮಾಡಿತ್ತು. ಕಂದಾಯ ಸಚಿವ ಕೃಷ್ಣಭೈರೇಗೌಡ, ಕೃಷಿ ಸಚಿವ ಚೆಲುವರಾಯಸ್ವಾಮಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹಲವು ಬಾರಿ ದೆಹಲಿಗೆ ತೆರಳಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸಚಿವರುಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದರು.

ಡಿಸೆಂಬರ್ನಲ್ಲಿ ಖುದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ದೆಹಲಿಗೆ ತೆರಳಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹಸಚಿವ ಅಮಿತ್ ಶಾ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿದ್ದರು. ಆದ–'ರೂ ರಾಜ್ಯಕ್ಕೆ ಯಾವ ಆರ್ಥಿಕ ನೆರವೂ ದೊರೆಯಲಿಲ್ಲ. ಕೊನೆಗೆ ರಾಜ್ಯಸರ್ಕಾರ ಸುಪ್ರೀಂಕೋರ್ಟ್ ಮೆಟ್ಟಿಲೇರಿತ್ತು. ವಿಚಾರಣೆ ನಡೆಸಿದ ನ್ಯಾಯಾಲಯದ ಎದುರು ಕೇಂದ್ರ ಸರ್ಕಾರ ಹೇಳಿಕೆ ನೀಡಿದ್ದು, ಒಂದು ವಾರದೊಳಗಾಗಿ ಬರ ನಿರ್ವಹಣೆಯ ಅನುದಾನದ ಬಗ್ಗೆ ತೀರ್ಮಾನ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದೆ.

ಈ ಬಗ್ಗೆ ಮಾಹಿತಿ ನೀಡಿರುವ ಕಂದಾಯ ಸಚಿವರು, ದೇಶದ ಇತಿಹಾಸದಲ್ಲೇ ಇಂತಹ ಸಂದರ್ಭಗಳು ಒದಗಿ ಬಂದಿರಲಿಲ್ಲ. ನಿಯಮಾನುಸಾರ ರಾಜ್ಯದ ಜನರಿಗೆ ದೊರೆಯಬೇಕಾಗಿದ್ದ ಪರಿಹಾರಕ್ಕಾಗಿ ನ್ಯಾಯಾಲಯದ ಮೆಟ್ಟಿಲು ಹತ್ತುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಈಗ ಪ್ರಕರಣ ಒಂದು ಹಂತಕ್ಕೆ ಬಂದಿದೆ. ಕೇಂದ್ರ ಸರ್ಕಾರ ಒತ್ತಡಕ್ಕೆ ಮಣಿದು ತನ್ನ ಅಭಿಪ್ರಾಯವನ್ನು ತಿಳಿಸಿದೆ. ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ಗೆ ಧನ್ಯವಾದ ಎಂದಿದ್ದಾರೆ.

# ಅಕ್ರಮ ಗೋವು ಸಾಗಣೆ ಆರೋಪ: ಲಾರಿ ಚಾಲಕನಿಗೆ ಥಳಿತ



ಬೆಳಗಾವಿ: 'ಲಾರಿಯೊಂದರಲ್ಲಿ ಅಕ್ರಮವಾಗಿ ಗೋವುಗಳನ್ನು ಸಾಗಿಸಲಾಗುತ್ತಿದೆ' ಎಂದು ಆರೋಪಿಸಿ, ಇಲ್ಲಿನ ಸುವರ್ಣ ವಿಧಾನಸೌಧ ಬಳಿ ಭಾನುವಾರ ರಾತ್ರಿ ಕೆಲವು ಹಿಂದೂ ಸಂಘಟನೆಗಳ ಕಾರ್ಯಕರ್ತರು, ಚಾಲಕನನ್ನು ಮನಬಂದಂತೆ ಥಳಿಸಿದ್ದಾರೆ. ಈ ಘಟನೆಯ ವಿಡಿಯೊಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿವೆ.

ಬೆಳಗಾವಿಯಿಂದ ಹುಬ್ಬಳ್ಳಿ ಕಡೆಗೆ ಗೋವುಗಳನ್ನು ಸಾಗಿಸಲಾಗುತ್ತಿತ್ತು. ಮಾರ್ಗಮಧ್ಯೆ ತಡೆದ ಕಾರ್ಯಕರ್ತರು, ಲಾರಿಯ ಗಾಜುಗಳನ್ನು ಒಡೆದು ಚಾಲಕನ ಮೇಲೆ ಹಲ್ಲೆ ಮಾಡಿದರು. ಇದರಿಂದಾಗಿ ರಾಷ್ಟ್ರೀಯ ಹೆದ್ದಾರಿ 4ರಲ್ಲಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು. ಅಪಾರ ಸಂಖ್ಯೆಯಲ್ಲಿ ಜನರು ಸೇರಿದರು. ಘಟನಾ ಸ್ಥಳಕ್ಕೆ ಬಂದ ಪೊಲೀಸರು ಪರಿಸ್ಥಿತಿ ತಿಳಿಗೊಳಿಸಿದರು.

ಘಟನಾ ಸ್ಥಳಕ್ಕೆ ಭೇಟಿ ನೀಡಿದ ಬೆಳಗಾವಿ ಲೋಕಸಭೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್, 'ಪೊಲೀಸರು ಈ ಬಗ್ಗೆ ಪರಿಶೀಲಿಸಿ, ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು' ಎಂದು ಮನವಿ ಮಾಡಿದರು.

ತನಿಖೆ ನಡೆಸುತ್ತಿದ್ದೇವೆ: 'ಲಾರಿ ತಡೆದ ಯುವಕರು ಚಾಲಕನ ಮೇಲೆ ಹಲ್ಲೆ ನಡೆಸಿದ್ದಾರೆ. ಪ್ರಾಥಮಿಕ ಮಾಹಿತಿ ಪ್ರಕಾರ, ಅದರಲ್ಲಿ 10ರಿಂದ 15 ಆಕಳು ಇದ್ದವು ಎಂದು ಗೊತ್ತಾಗಿದೆ. ಗಾಯಾಳುಗಳಿಗೆ ಚಿಕಿತ್ಸೆ ನೀಡಲಾಗಿದ್ದು, ತನಿಖೆ ನಡೆಸುತ್ತಿದ್ದೇವೆ' ಎಂದು ನಗರ ಪೊಲೀಸ್ ಉಪ ಆಯುಕ್ತ (ಕಾನೂನು ಮತ್ತು ಸುವ್ಯವಸ್ಥೆ ವಿಭಾಗ) ರೋಹನ ಜಗದೀಶ್ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದರು.

# ನೇಹಾ ಕೊಲೆ ಖಂಡಿಸಿ ಪ್ರತಿಭಟನೆ, ಲವ್ ಜಿಹಾದ್ ನಿಷೇಧ ಕಾನೂನಿಗೆ ಆಗ್ರಹ

ಬೆಳಗಾವಿ: ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆ ಖಂಡಿಸಿ ಇಲ್ಲಿನ ಜಾಗ್ರತ ಮಹಿಳಾ ವೇದಿಕೆ ನೇತೃತ್ವದಲ್ಲಿ ನಗರದಲ್ಲಿ ಸೋಮವಾರ ಬೃಹತ್ ಪ್ರತಿಭಟನೆ ನಡೆಯಿತು.

ನೇತೃತ್ವ ವಹಿಸಿದ್ದ ಮಹಿಳಾ ಹೋರಾಟಗಾರರು, ಮಠಾಧೀಶರು ಆರೋಪಿ ಫಯಾಜ್‌ಗೆ ಗಲ್ಲು ಶಿಕ್ಷೆ ವಿಧಿಸಬೇಕು, ಲವ್ ಜಿಹಾದ್ ಪ್ರತಿಬಂಧಕ ಕಾನೂನು ರೂಪಿಸಬೇಕು ಎಂದು ಆಗ್ರಹಿಸಿದರು.

ಇಲ್ಲಿನ ಮಾರುತಿ ಗಲ್ಲಿಯ ಮಾರುತಿ ಮಂದಿರದಿಂದ ಪ್ರತಿಭಟನಾ ಮೆರವಣಿಗೆ ಆರಂಭವಾಯಿತು. ರಾಮದೇವ ಗಲ್ಲಿ, ಶನಿವಾರ ಕೂಟ್‌ನಿಂದ ಕಾಕತಿವೇಸ್‌ನಲ್ಲಿ ಸಾಗಿದ ಪ್ರತಿಭಟನಾಕಾರರು, ರಾಣಿ ಚನ್ನಮ್ಮ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿದರು.

ಅಪಾರ ಸಂಖ್ಯೆಯಲ್ಲಿ ಸೇರಿದ ಮಹಿಳೆಯರು ಹಾಗೂ ವಿವಿಧ ಕಾಲೇಜುಗಳ ವಿದ್ಯಾರ್ಥಿನಿಯರು ಮಾರ್ಗದುದ್ದಕ್ಕೂ ಆಕ್ರೋಶ ಹೊರಹಾಕಿದರು. ಲವ್ ಜಿಹಾದ್‌ಗೆ ಧಿಕ್ಕಾರ, ಹಿಂದೂ ವಿರೋಧಿ ರಾಜ್ಯ ಸರ್ಕಾರಕ್ಕೆ ಧಿಕ್ಕಾರ, ಕೊಲೆಗಡುಗರಿಗೆ ಗಲ್ಲು ಶಿಕ್ಷೆ ವಿಧಿಸಬೇಕು, ನೇಹಾಗೆ ನ್ಯಾಯ ಕೊಡಿ ಇಲ್ಲವೇ ಕುರ್ಚಿ ಬಿಡಿ, ಜೈ ಶ್ರೀರಾಮ್ ಎಂದು ಘೋಷಣೆ ಮೊಳಗಿಸಿದರು.

ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದ ಕಾಲೇಜು ವಿದ್ಯಾರ್ಥಿನಿಯರು ಕೂಡ ಹೆಣ್ಣುಮಕ್ಕಳಿಗೆ ರಕ್ಷಣೆ ಕೊಡಿ ಎಂದು ಒತ್ತಾಯಿಸಿದರು. ಕರ್ನಾಟಕವೂ 'ಕೇರಳ' ರೀತಿ ಆಗುವುದಕ್ಕಿಂತ ಮುನ್ನ ಹಿಂದೂಗಳೇ ಎಚ್ಚೆತ್ತುಕೊಳ್ಳಿ ಎಂದು ಭಿತ್ತಿಪತ್ರಗಳನ್ನು ಪ್ರದರ್ಶಿಸಿದರು.

ಹೆಣ್ಣುಮಕ್ಕಳು ಉರಿಬಿಸಿಲನ್ನೂ ಲೆಕ್ಕಿಸದೇ ಮಾರುಕಟ್ಟೆಯಲ್ಲಿ ಕಿಲೋಮೀಟರ್ ದೂರ ಕ್ರಮಿಸಿದರು. ಕೇಸರಿ ರುಮಾಲುಗಳನ್ನು ಕೊರಳಿಗೆ ಹಾಕಿಕೊಂಡು ಸಾಗಿದರು.

ಸಂಸದೆ ಮಂಗಲಾ ಅಂಗಡಿ, ಬೆಳಗಾವಿ ಲೋಕಸಭೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ




ಶೆಟ್ಟರ್, ಮಾಜಿ ಶಾಸಕರಾದ ಸಂಜಯ ಪಾಟೀಲ, ಅನಿಲ ಬೆನಕೆ ಹಾಗೂ ಬಿಜೆಪಿ ಮಹಿಳಾ ಘಟಕದ ನಾಯಕಿಯರು ಕೂಡ ಬೆಂಬಲ ಸೂಚಿಸಿದರು.

### 'ಪ್ರೀತಿಸುವವರು ತಾಜ್‌ಮಹಲ್ ಕಟ್ಟಿಸುತ್ತಾರೆ; ಕೊಲ್ಲುವುದಿಲ್ಲ'

ಚನ್ನಮ್ಮ ವೃತ್ತದಲ್ಲಿ ಮಾತನಾಡಿದ ಸೇವಾ ಭಾರತಿ ಮುಖ್ಯಸ್ಥೆ ಶಿಲ್ಪಾ ವೇರ್ಣೇಕರ, 'ಆರೋಪಿ ನಿಜವಾಗಿಯೂ ಪ್ರೀತಿ ಮಾಡುತ್ತಿದ್ದ ಎಂದಾದರೆ ತಾಜ್‌ಮಹಲ್ ಕಟ್ಟಿಸುತ್ತಿದ್ದ. ಅವನು ಲವ್ ಜಿಹಾದ್ ನಡೆಸಿದ ಕಾರಣಕ್ಕೇ ಕೊಲೆ ಮಾಡಿದ್ದಾನೆ.

ಇದು ಗೊತ್ತಿದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹಮಂತ್ರಿ ಪರಮೇಶ್ವರ್ ಅವರು ತುಂಬಾ ಹಗುರವಾಗಿ ಮಾತನಾಡಿದ್ದಾರೆ. ನಮ್ಮ ಮನೆ ಮಗಳ ಹತ್ಯೆಯಾದರೆ ಕಾಂಗ್ರೆಸ್ಸಿಗರಿಗೆ ಉಡಾಫೆ ವಿಷಯವೇ' ಎಂದರು.

'ಮುನವಳ್ಳಿ ಗ್ರಾಮದ ಮಹಿಳೆಯೊಬ್ಬರನ್ನು ಕೆಲಸ ಕೊಡಿಸುತ್ತೇವೆ ಎಂದು ನಂಬಿಸಿ, ಬೆಳಗಾವಿ ಕರೆತಂದು ಅತ್ಯಾಚಾರ ಎಸಗಲಾಗಿದೆ. ಮುಸ್ಲಿಂ ಆಗಿ ಮತಾಂತರ ಆಗಲು ಒತ್ತಾಯಿಸಿ ಹಿಂಸೆ ನೀಡಲಾಗಿದೆ.

ಇಷ್ಟೆಲ್ಲಾ ಆದರೂ ಕಾಂಗ್ರೆಸ್ ಸರ್ಕಾರ ಮುಸ್ಲಿಮರ ಮತ ಓಲೈಕೆಯಲ್ಲಿ ತೊಡಗಿದೆ' ಎಂದು ಆರೋಪಿಸಿದರು. 'ಹಿಂದೂ ಹೆಣ್ಣುಮಕ್ಕಳು ಲಕ್ಷ್ಮಿಯೂ ಆಗಬೇಕು, ದುರ್ಗೆಯೂ ಆಗಬೇಕು. ನೇಹಾಗೆ ಚುಚ್ಚಿ ಕೊಲೆ ಮಾಡಿದ ಗತಿಯನ್ನೇ ದುಷ್ಟರಿಗೆ ತರಬೇಕು' ಎಂದರು.

ಡಾ.ಹರ್ಪಿತ್ ಕೌರ್ ಮಾತನಾಡಿ, 'ನೀವು ನೇಹಾ ಜಾಗದಲ್ಲಿ ಇದ್ದಿದ್ದರೆ ಏನು ಮಾಡುತ್ತಿದ್ದೀರಿ? ಅಥವಾ ನೇಹಾಳ ಪಾಲಕರ ಸ್ಥಾನದಲ್ಲಿ ಇದ್ದಿದ್ದರೆ ಏನು ಮಾಡುತ್ತಿದ್ದೀರಿ? ಈ ಎರಡು ಪ್ರಶ್ನೆಗಳನ್ನು ಹಿಂದೂ ಸಮಾಜ ಕೇಳಿಕೊಂಡು ಜಾಗೃತವಾಗಬೇಕು' ಎಂದರು.

ಶ್ರೀರಾಮ ಸೇನೆ ಜಿಲ್ಲಾ ಘಟಕದ ಅಧ್ಯಕ್ಷ ರವಿ ಕೋಕಿತಕರ ಮಾತನಾಡಿ, 'ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬರುತ್ತಿದ್ದಂತೆ-ಯೇ ಹಿಂದೂಗಳ ಮೇಲೆ ಹಲ್ಲೆ, ಕೊಲೆ, ಅತ್ಯಾಚಾರಗಳು ಹೆಚ್ಚಿವೆ. ಶಾಲೆ-ಕಾಲೇಜಿಗೆ ಹೋಗುವ ನಮ್ಮ ಮಕ್ಕಳಿಗೆ ರಕ್ಷಣೆ ಇಲ್ಲವಾಗಿದೆ.

ನೇಹಾಗೆ ನ್ಯಾಯ ಕೊಡಿಸಲು ಆಗದಿದ್ದರೆ ಸಿದ್ದರಾಮಯ್ಯ ರಾಜೀನಾಮೆ ನೀಡಲಿ. ನಾವು ಪ್ರಧಾನಿ ಮೋದಿ ಕರೆತಂದು ನ್ಯಾಯ ಪಡೆಯುತ್ತೇವೆ' ಎಂದರು.

ಆರ್‌ಎಸ್‌ಎಸ್ ಮುಖಂಡ ರಾಮಚಂದ್ರ ಏಡಕೆ ಮಾತನಾಡಿ, 'ರಾಜ್ಯದಲ್ಲಿ ಮೊಘಲರ ಆಡಳಿತ, ರಜಾಕರ ಆಡಳಿತ ಇದೆ ಎಂಬ ಅನುಭವ ಆಗುತ್ತಿದೆ.

ಲವ್ ಜಿಹಾದಿಗಳಿಗೆ, ಪಾಕಿಸ್ತಾನ್ ಜಿಂದಾಬಾದ್ ಎಂದು ಕೂಗುವವರಿಗೆ ರಾಜ್ಯ ಸರ್ಕಾರವೇ ಬೆಂಬಲವಾಗಿ ನಿಂತಿದೆ. ಇಂಥ ಕ್ರೂರ ಕೊಲೆಯನ್ನು ಹಗುರವಾಗಿ ಕಾಣುತ್ತಿರುವ ಸಿದ್ದರಾಮಯ್ಯ ಅವರಿಗೆ ಕ್ರೂರ ಮನಸ್ಥಿತಿ ಇದೆ' ಎಂದು ಕಿಡಿ ಕಾರಿದರು.

ಬಿಜೆಪಿ ಮಹಿಳಾ ಜಿಲ್ಲಾ ಘಟಕದ ಅಧ್ಯಕ್ಷೆ ಡಾ.ನಯನಾ ಭಸ್ಮೆ ಮಾತನಾಡಿ, 'ನಮ್ಮ ದುಡ್ಡಿನಲ್ಲಿ ಆರೋಪಿಗೆ ಬಿರಿಯಾನಿ ತಿನ್ನಿಸುವುದನ್ನು ನಿಲ್ಲಿಸಿ ಸಿದ್ದರಾಮಯ್ಯ. ಲವ್ ಜಿಹಾದ್ ನಿಯಂತ್ರಣಕ್ಕೆ ಕಠಿಣ ಕಾನೂನು ತನ್ನಿ' ಎಂದು ಆಗ್ರಹಿಸಿದರು.

ವಿದ್ಯಾರ್ಥಿನಿ ಶ್ರೀಗೌರಿ ಮಾತನಾಡಿ, 'ಪುಕ್ಕಟೆ ಸೌಲಭ್ಯ ಕೊಡುತ್ತಾರೆ ಯಾರನ್ನೋ ಚುನಾಯಿಸಿದರೆ ಇಂಥ ಸ್ಥಿತಿ ಬರುತ್ತದೆ. ಒಂದು ಸೂಜಿ ಚುಚ್ಚಿದರೂ ಎಷ್ಟೊಂದು ನೋವಾಗುತ್ತದೆ. ಅಂಥದ್ದರಲ್ಲಿ 9 ಬಾರಿ ಚೂರಿಯಿಂದ ಚುಚ್ಚಿದ್ದಾನೆ. ನೇಹಾ ಎಷ್ಟು ನೋವು ಪಟ್ಟಿದ್ದಾಳೆಂದ ಊಹಿಸುವುದಕ್ಕೂ ಆಗುತ್ತಿಲ್ಲ' ಎಂದರು.

ಲೀನಾ ಟೋಪಣ್ಣವರ ಮಾತನಾಡಿ, 'ಪ್ರೀತಿಗಾಗಿ ಪೀಡಿಸುತ್ತಾರೆ. ಪ್ರೀತಿ ಒಪ್ಪಿಕೊಂಡರೆ ಮತಾಂತರ ಮಾಡುತ್ತಾರೆ. ಒಪ್ಪಿಕೊಳ್ಳದಿದ್ದರೆ ಕೊಲೆ ಮಾಡುತ್ತಾರೆ. ನಾವು ಹೇಗೆ ಬದುಕಬೇಕು ಹೇಳಿ' ಎಂದು ಪ್ರಶ್ನಿಸಿದರು.

ವೇದಿಕೆ ಅಧ್ಯಕ್ಷೆ ಜಯಶ್ರೀ ಜಾಧವ, ಕಾರ್ಯದರ್ಶಿ ವಿದ್ಯಾ ಜೋಶಿ, ಹಿಂದೂ ಮಹಾಪರಿಷತ್ ವಿ.ವಿ.ಘಸ್ತಿ, ಬೆಳಗಾವಿಯ ತೇಜಪ್ರತಿಬಿಂಬ ಪೀಠದ ಹರಿಗುರು ಮಹಾರಾಜ, ಬಾಪಟಗಲ್ಲಿ ನಾಗನಾಥ ಸ್ವಾಮೀಜಿ, ಮುಪ್ಪಿನ ಕಾಡಸಿದ್ದೇಶ್ವರ ಸ್ವಾಮೀಜಿ, ಸಿದ್ದನಕೊಳ್ಳ ಮಠದ ಗಂಗಾಧರ ಸ್ವಾಮೀಜಿ ಮಾತನಾಡಿದರು.



# ವಿಮಾನದಲ್ಲಿ ಬಾರದ ಲಗೇಜ್: ಪ್ರಯಾಣಿಕರ ಪರದಾಟ

ಬೆಳಗಾವಿ: ಬೆಂಗಳೂರಿನಿಂದ ಇಲ್ಲಿನ ಸಾಂಬ್ರಾ ವಿಮಾನ ನಿಲ್ದಾಣ-ಕ್ಕೆ ಭಾನುವಾರ ಸಂಜೆ ಬಂದಿಳಿದ ಇಂಡಿಗೊ ಸಂಸ್ಥೆಯ ವಿಮಾನದಲ್ಲಿ ಪ್ರಯಾಣಿಸಿದ 20 ಕ್ಕೂ ಅಧಿಕ ಪ್ರಯಾಣಿಕರ ಲಗೇಜ್‌ಗಳನ್ನು ಬೆಂಗಳೂರಿನಲ್ಲೇ ಬಿಟ್ಟುಬರಲಾಗಿತ್ತು.

ಬೆಂಗಳೂರಿನಿಂದ ಸಂಜೆ 5.55ಕ್ಕೆ ಹೊರಟ ವಿಮಾನ, ರಾತ್ರಿ 7.25ಕ್ಕೆ ಇಲ್ಲಿಗೆ ಬಂದು ತಲುಪಿತು. ಆದ-ರೆ, ತಮ್ಮ ಲಗೇಜ್‌ಗಳು ಬಾರದ ಹಿನ್ನೆಲೆಯಲ್ಲಿ ಶಾಸಕ ಬಸವರಾಜ ಬೊಮ್ಮಾಯಿ ಸೇರಿದಂತೆ 20ಕ್ಕೂ ಅಧಿಕ ಪ್ರಯಾಣಿಕರು ಪರದಾಡಿದರು. ವಿಮಾನ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು.

'ಈ ವಿಮಾನದಲ್ಲಿ ಮಲೇಷಿಯಾ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಸಿದ್ದರು. ಅವರ ಬ್ಯಾಗ್



ಬೆಂಗಳೂರಿನಿಂದ ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಬಂದಿಳಿದ ಪ್ರಯಾಣಿಕರು ತಮ್ಮ ಲಗೇಜ್‌ಗಳು ಇಲ್ಲದೆ ಪರದಾಡಿದರು

ಹೆಚ್ಚಿನ ಭಾರವಿರುವ ಕಾರಣಕ್ಕೆ, ನಮ್ಮ ಬ್ಯಾಗ್ ಬಿಟ್ಟುಬರಲಾಗಿದೆ. ನಮ್ಮಲ್ಲಿ ಹಲವರು ಹಿರಿಯ ನಾಗರಿಕರಿದ್ದಾರೆ. ಅವರ ಔಷಧ, ಅಗತ್ಯ ವಸ್ತುಗಳು ಅದರಲ್ಲಿವೆ. ವಿಮಾನ ಸಿಬ್ಬಂದಿ ಬೇಜವಾಬ್ದಾರಿಯಿಂದ ನಾವು ತೊಂದರೆ ಅನುಭವಿಸುವಂತಾಗಿದೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.

'ವಿಮಾನ ಟೇಕಾಫ್ ಆಗುವ ಕೆಲವೇ ನಿಮಿಷ ಮುನ್ನ, ಪ್ರಯಾಣಿಕರ ಲಗೇಜ್‌ಗಳ ಭಾರ ಹೆಚ್ಚಾಗಿರುವುದು ಗೊತ್ತಾಗಿದೆ. ಹಾಗಾಗಿ ಹೆಚ್ಚುವರಿ ಲಗೇಜ್ ಬಿಟ್ಟುಬರಲಾಗಿದೆ. ಮುಂಚಿತವಾಗಿ ಮಾಹಿತಿ ನೀಡಿ-ದರೆ ಪ್ರಯಾಣಿಕರು ಆತಂಕಗೊಳ್ಳುವ ಕಾರಣ, ಈಗ ಮಾಹಿತಿ ಕೊಡಲಾಗಿದೆ. ಸೋಮವಾರ ಬೆಳಿಗ್ಗೆ ಬರಲಿರುವ ಮೊದಲ ವಿಮಾನದಲ್ಲಿ ಎಲ್ಲ ಲಗೇಜ್‌ಗಳನ್ನು ತರಿಸಿ, ಪ್ರಯಾಣಿಕರ ಮನೆಗೇ ತಲುಪಿಸಲಾಗುವುದು' ಎಂದು ಸಾಂಬ್ರಾ ವಿಮಾನ ನಿಲ್ದಾಣ ನಿರ್ದೇಶಕ ಎಸ್.ತ್ಯಾಗರಾಜನ್ ತಿಳಿಸಿದರು.

ಬೆಂಗಳೂರಿನಿಂದ ಇಲ್ಲಿನ ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಭಾನುವಾರ ಸಂಜೆ ಬಂದಿಳಿದ ಇಂಡಿಗೊ ಸಂಸ್ಥೆಯ ವಿಮಾನದಲ್ಲಿ ಪ್ರಯಾಣಿಸಿದ 20ಕ್ಕೂ ಅಧಿಕ ಪ್ರಯಾಣಿಕರ ಲಗೇಜ್ ಅನ್ನು ಬೆಂಗಳೂರಿನಲ್ಲೇ ಬಿಟ್ಟು ಬಂದಿರುವ ಘಟನೆ ನಡೆದಿದೆ. ಇದರಿಂದಾಗಿ ಪ್ರಯಾಣಿಕರು ಪರದಾಡಿದರು.

# ಮಹಾವೀರ ಜಯಂತಿ: ಕಣ್ಮನ ಸೆಳೆದ ಶೋಭಾಯಾತ್ರೆ

ಬೆಳಗಾವಿ: ಭಗವಾನ್ ಮಹಾವೀರ ಜನ್ಮಕಲ್ಯಾಣ ಮಹೋತ್ಸವ ಅಂಗವಾಗಿ ನಗರದಲ್ಲಿ ಭಾನುವಾರ ನಡೆದ ಶೋಭಾಯಾತ್ರೆ ಕಣ್ಮನಸೆಳೆಯಿತು.

ಬೆಳಗಾವಿ ಲೋಕಸಭೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್, ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ, ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಶಾಸಕ ಅಭಯ ಪಾಟೀಲ, ಬಿಜೆಪಿ ಮುಖಂಡರಾದ ಸಂಜಯ ಪಾಟೀಲ, ಅನಿಲ ಬೆನಕೆ ಮತ್ತಿತರ ನಾಯಕರು, ಇಲ್ಲಿನ ಸಮಾದೇವಿ ಗಲ್ಲಿಯಲ್ಲಿ ಯಾತ್ರೆಗೆ ಒಟ್ಟಾಗಿ ಚಾಲನೆ ನೀಡಿದರು.

ಇಲ್ಲಿಂದ ರಾಮದೇವ ಗಲ್ಲಿ, ಕಿರ್ಲೋಸ್ಕರ್ ರಸ್ತೆ, ರಾಮಲಿಂಗಖಿಂಡ ಗಲ್ಲಿ, ಟಿಳಕ ಚೌಕ್, ಶೇರಿ ಗಲ್ಲಿ, ಪಾಟೀಲ ಗಲ್ಲಿಯ ಶನಿ ಮಂದಿರ, ಕಪಿಲೇಶ್ವರ ರಸ್ತೆ, ಶಹಾಪುರ ಕೋರೆ ಗಲ್ಲಿ, ಎಸ್‌ಪಿಎಂ ರಸ್ತೆ, ಬಸವೇಶ್ವರ ವೃತ್ತದ ಮಾರ್ಗವಾಗಿ ಸಾಗಿದ ಶೋಭಾಯಾತ್ರೆ, ಹಿಂದವಾಡಿಯ ಮಹಾವೀರ ಭವನ ತಲುಪಿತು. ವಿವಿಧ ಕಲಾ ತಂಡಗಳ ಪ್ರದರ್ಶನ ಮನಸೆಳೆಯಿತು.

ಅಪಾರ ಸಂಖ್ಯೆಯಲ್ಲಿ ಸೇರಿದ್ದ ಜನರು,



ಉತ್ಸಾಹದಿಂದ ಹೆಜ್ಜೆಹಾಕಿದರು. ಜೈನ ಯುವ ಸಂಘಟನೆ ವತಿಯಿಂದ ಬೈಕ್ ರ‍್ಯಾಲಿಯೂ ನಡೆಯಿತು.

ಮಹಾವೀರರ ತತ್ವಾದರ್ಶ ಪಾಲಿಸಿ: 'ಇಡೀ ವಿಶ್ವಕ್ಕೆ ಶಾಂತಿ, ಅಹಿಂಸೆ ತತ್ವಗಳನ್ನು ಬೋಧಿಸಿ, ಮಾನವನ ಜೀವನ ಪಾವನಗೊಳಿಸಿದ ಭಗವಾನ್ ಮಹಾವೀರರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಪಾಲಿಸಬೇಕಾಗಿದೆ' ಎಂದು ಸಂಶೋಧಕ ಮದನ ಗೊಡಬೋಲೆ ಹೇಳಿದರು.

ಇಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಭಗವಾನ್ ಮಹಾವೀರ ಜನ್ಮಕಲ್ಯಾಣ ಮಹೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, 'ಇಂದು ಕೆಲವಡೆ ಯುದ್ಧದ ಪರಿಸ್ಥಿತಿ ಇದೆ. ಮನುಷ್ಯರಲ್ಲಿ ಪ್ರೀತಿ, ವಿಶ್ವಾಸ ಕಡಿಮೆಯಾಗುತ್ತಿದೆ.

ಹಾಗಾಗಿ ಎಲ್ಲರೂ ಮಹಾವೀರರ ಸಂದೇಶಗಳನ್ನು ಪಾಲಿಸುತ್ತ ಮಾನವ ಕಲ್ಯಾಣಕ್ಕೆ ಶ್ರಮಿಸೋಣ' ಎಂದು ಕರೆ ನೀಡಿದರು.

# ಹುಕ್ಕೇರಿ: ಮತದಾರರಿಗೆ ಓಟರ್ ಸ್ಲೀಪ್ ವಿತರಣೆ



ಹುಕ್ಕೇರಿ: ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ ತಾಲೂಕಿನ ಯಾದಗೂಡ ಗ್ರಾಮದಲ್ಲಿ ಸೋಮವಾರ ಮತದಾರರಿಗೆ ವೋಟರ್ ಸ್ಲೀಪ್ ಮತ್ತು ಮತದಾನ ತಿಳುವಳಿಕೆ ಕರಪತ್ರಗಳನ್ನು ವಿತರಿಸಲಾಯಿತು.

ಚುನಾವಣಾಧಿಕಾರಿಯೂ ಆದ ಜಿಲ್ಲಾ ಪಂಚಾಯಿತಿ ಸಿಇಒ ರಾಹುಲ ಶಿಂಧೆ ಅವರು ಮತದಾರರಿಗೆ ಓಟರ್ ಸ್ಲೀಪ್ ಮತ್ತು ಮತದಾನ ಜಾಗೃತಿ ಮೂಡಿಸುವ ಕರಪತ್ರ ವಿತರಿಸಿ ಮಾತನಾಡಿ, ಬರುವ ಮೇ.7 ರಂದು ಮತಗಟ್ಟೆಗೆ ಹೋಗಿ ಮತ ಚಲಾವಣೆ ಮಾಡಬೇಕು.

ಪ್ರಜಾಪ್ರಭುತ್ವ ಹಬ್ಬದಲ್ಲಿ ಮತದಾನ ಮಾಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ. ಯಾರು ಮತದಾನದಿಂದ ಹೊರಗೆ ಉಳಿಯಬಾರದು. ಬಿಎಲ್‌ಓಗಳು ಪ್ರತಿ ಮನೆಗೆ ವೋಟರ್ ಸ್ಲೀಪಗಳನ್ನು ವಿತರಿಸಿ ಅವರಿಂದ ಸ್ವೀಕೃತಿ ಪಡೆದುಕೊಳ್ಳಲು ಸೂಚಿಸಿದರು.

ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಸಹಾಯಕ ಚುನಾವಣಾಧಿಕಾರಿ ರೇಖಾ ಡೊಳ್ಳಿನವರ, ತಹಶೀಲ್ದಾರ ಬಲರಾಮ ಕಟ್ಟಿಮನಿ, ತಾಪಂ ಇಒ ಟಿ.ಆರ್. ಮಲ್ಲಾಡದ, ಕಂದಾಯ ನೀರಿಕ್ಷಕ ಎಂ.ಬಿ.ಸಾರಾಪೂರಿ, ಪಿಡಿಒ ಸಿ.ಸಿ.ಮುತ್ತೂರು, ಕಾರ್ಯದರ್ಶಿ ಬಿ.ಎ. ಓಂಕಾರ, ಗ್ರಾಮ ಆಡಳಿತ ಅಧಿಕಾರಿ ಆರ್.ಆರ್.ಹುಡೇದ, ಐಇಸಿ ಸಂಯೋಜಕ ಮಹಾಂತೇಶ ಬಾದವನಮಠ ಮತ್ತಿತರರು ಉಪಸ್ಥಿತರಿದ್ದರು.

# ಬಿಸಿಯೂಟ ಸೇವನೆಗೆ ಮಕ್ಕಳ 'ಬರ'

ಬೆಳಗಾವಿ: ಸಪ್ತ ನದಿಗಳು ಹರಿಯುವ ಬೆಳಗಾವಿ ಜಿಲ್ಲೆ ಈ ಬಾರಿ ಬರದಿಂದ ತತ್ತರಿಸಿದೆ. 15 ತಾಲ್ಲೂಕುಗಳನ್ನು 'ಬರಪೀಡಿತ'ವೆಂದು ಘೋಷಿಸಿದ್ದು, ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಬೇಸಿಗೆ ರಜೆಯಲ್ಲೂ ಬಿಸಿಯೂಟ ನೀಡಲಾಗುತ್ತಿದೆ. ಆದರೆ, ಸೇವನೆಗೆ ನಿರೀಕ್ಷೆಯಂತೆ ಮಕ್ಕಳೇ ಬರುತ್ತಿಲ್ಲ.

ಬರಪೀಡಿತ ತಾಲ್ಲೂಕುಗಳಲ್ಲಿ ಮಕ್ಕಳಿಗೆ ಪೌಷ್ಟಿಕಾಂಶ ಕೊರತೆ ಕಾಡದಿರಲೆಂದು ಪ್ರಧಾನಮಂತ್ರಿ ಪೋಷಣ್ ಶಕ್ತಿ-ನಿರ್ಮಾಣ ಯೋಜನೆಯಡಿ ಬೇಸಿಗೆ ರಜೆಯಲ್ಲೂ (ಏ.11ರಿಂದ ಮೇ 28ರವರೆಗೆ 41 ದಿನ) ಬಿಸಿಯೂಟ ಕೊಡಲಾಗುತ್ತಿದೆ. 1 ರಿಂದ 10ನೇ ತರಗತಿಯಲ್ಲಿ ಓದುತ್ತಿರುವ 3,17,997 ಮಕ್ಕಳು ಬಿಸಿಯೂಟ ಸೇವಿಸಲು ಒಪ್ಪಿಗೆ ಕೊಟ್ಟಿದ್ದಾರೆ.

ಆದರೆ, ಏಪ್ರಿಲ್ 16ರ ವರದಿ ಪ್ರಕಾರ, ಒಪ್ಪಿಗೆ ಕೊಟ್ಟವರಲ್ಲಿ ಶೇ 33ರಷ್ಟು ಮಕ್ಕಳಷ್ಟೇ(1,07,086) ಸೇವಿಸುತ್ತಿದ್ದಾರೆ. ಈ ಪೈಕಿ 1ರಿಂದ 5ನೇ ತರಗತಿಯವರು 60,880, 6ರಿಂದ 8ನೇ ತರಗತಿಯವರು 34,851 ಮತ್ತು 9ರಿಂದ 10ನೇ ತರಗತಿಯವರು 11,355 ಮಕ್ಕಳಿದ್ದಾರೆ. ಚನ್ನಮ್ಮನ ಕಿತ್ತೂರು



ಮತ್ತು ಖಾನಾಪುರ ವಲಯದ ಶಾಲೆಗಳಲ್ಲಿ ಬಿಸಿಯೂಟ ಸೇವಿಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಸಾವಿರದ ಗಡಿಯನ್ನೂ ದಾಟಿಲ್ಲ.

ತಾತ್ಕಾಲಿಕ ಸ್ಥಗಿತಕ್ಕೆ ಮನವಿ: ಸಾಮಾನ್ಯ ದಿನಗಳಲ್ಲಿ ಜಿಲ್ಲೆಯಲ್ಲಿ 5.60 ಲಕ್ಷ ಮಕ್ಕಳು ಬಿಸಿಯೂಟ ಸೇವಿಸುತ್ತಿದ್ದರು. ಈಗ ಒಪ್ಪಿಗೆ ಸೂಚಿಸಿದವರಿಗಷ್ಟೇ ಬಿಸಿಯೂಟ ಕೊಡಲು ತೀರ್ಮಾನಿಸಲಾಗಿದೆ.

ಜಿಲ್ಲೆಯಲ್ಲಿ 3,236 ಶಾಲೆಗಳ ಮಕ್ಕಳಿಗೆ ನೀಡುತ್ತಿರುವ ಬಿಸಿಯೂಟವನ್ನು ಆಯಾ ಶಾಲೆಗಳಲ್ಲೇ ತಯಾರಿಸಲಾಗುತ್ತಿದೆ. ಆದರೆ, ಕೆಲವೆಡೆ ಸೇವನೆಗೆ ಒಬ್ಬ ವಿದ್ಯಾರ್ಥಿಯೂ ಬರುತ್ತಿಲ್ಲ. ಇದರಿಂದಾಗಿ ಆಹಾರ ಮತ್ತು ಅಡುಗೆ ಸಿಬ್ಬಂದಿ ಶ್ರಮ ಎರಡೂ ವ್ಯರ್ಥವಾಗುತ್ತಿದೆ.

ಹಾಗಾಗಿ ಬೇಸಿಗೆಯಲ್ಲಿ ತಾತ್ಕಾಲಿಕವಾಗಿ ಯೋಜನೆಯನ್ನೇ ಸ್ಥಗಿತಗೊಳಿಸುವಂತೆ ಕೆಲವು ಶಾಲೆಯವರು ಮನವಿ ಮಾಡುತ್ತಿದ್ದಾರೆ.

ಹಿಂದೇಟಿಗೆ ಕಾರಣವೇನು?: 'ಬೇಸಿಗೆಯಲ್ಲಿ ಬಿಸಿಯೂಟ ನೀಡುತ್ತಿರುವ ಬಗ್ಗೆ ವ್ಯಾಪಕವಾಗಿ ಪ್ರಚಾರ ಮಾಡಿದ್ದೇವೆ.

ಮಕ್ಕಳು ಒಂದರಿಂದ ಎರಡು ಕಿ.ಮೀ ಅಂತರದಲ್ಲೇ ಶಾಲೆಗೆ ಬಿಸಿಯೂಟ ಸೇವನೆಗೆ ಬರುವಂತೆ ವ್ಯವಸ್ಥೆ ಮಾಡಿದ್ದೇವೆ. ಆದರೆ, ಈಗ ಹಳ್ಳಿಗಳಲ್ಲಿ ಜಾತ್ರೆಗಳ ಸುಗ್ಗಿ ಆರಂಭವಾಗಿದೆ.

ಹಲವು ಮಕ್ಕಳು ಪ್ರವಾಸಕ್ಕೆ ಮತ್ತು ಸಂಬಂಧಿಗಳ ಊರಿಗೆ ಹೋಗಿರುವುದರಿಂದ ಬಿಸಿಯೂಟ-ಕ್ಕೆ ಸೇವನೆಗೆ ಬರುತ್ತಿಲ್ಲ' ಎಂದು ಅಧಿಕಾರಿಗಳು ಹೇಳುತ್ತಾರೆ.

'ಶೇ 33ರಷ್ಟು ಮಕ್ಕಳು ಬಿಸಿಯೂಟ ಸೇವಿಸುತ್ತಿರುವುದಾಗಿ ಲೆಕ್ಕ ತೋರಿಸಲಾಗುತ್ತಿದೆ. ವಾಸ್ತವವಾಗಿ ಅಷ್ಟು ಮಕ್ಕಳೂ ಊಟಕ್ಕೆ ಬರುತ್ತಿಲ್ಲ' ಎನ್ನುವ ಆರೋಪವೂ ಇದೆ.

ಬಿಸಿಯೂಟ ಸೇವನೆಗೆ ಮಕ್ಕಳನ್ನು ಕರೆತರಲು ಎಲ್ಲ ಪ್ರಯತ್ನ ನಡೆಸಿದ್ದೇವೆ. ಕೆಲವೆಡೆ ಉತ್ತಮ ಸ್ಪಂದನೆ ಸಿಕ್ಕಿದೆ. ಮಕ್ಕಳಿಲ್ಲ ಎಂಬ ಕಾರಣಕ್ಕೆ ಯಾವ ಶಾಲೆಯಲ್ಲೂ ಬಿಸಿಯೂಟ ನಿಲ್ಲಿಸಲ್ಲ

ಲಕ್ಷ್ಮಣರಾವ್ ಯಕ್ಕುಂಡಿ
ಶಿಕ್ಷಣಾಧಿಕಾರಿ ಪ್ರಧಾನಮಂತ್ರಿ ಪೋಷಣ್-ಶಕ್ತಿ ನಿರ್ಮಾಣ ಯೋಜನೆ ಬೆಳಗಾವಿ

# ಸಂಸ್ಕಾರ ಕಲಿತು ರಾಜಕೀಯ ಮಾಡಿ: ಮೃಣಾಲ್‌ಗೆ ಮಂಗಲಾ ಅಂಗಡಿ ತಾಕೀತು

ಬೆಳಗಾವಿ: 'ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಅವರು ಮೊದಲು ಹಿರಿಯರಿಗೆ ಗೌರವ ಕೊಟ್ಟು ಮಾತನಾಡುವುದನ್ನು ಕಲಿಯಬೇಕು. ನಂತರ ರಾಜಕೀಯ ಮಾಡಬೇಕು' ಎಂದು ಸಂಸದೆ ಮಂಗಲಾ ಅಂಗಡಿ ಕಿಡಿ ಕಾರಿದರು.



ನಗರದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ನನ್ನ ಭಾವಚಿತ್ರ ಅಳವಡಿಸಿ ಒಂದು ಪೋಸ್ಟನ್ನು ಮೃಣಾಲ್ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದಾರೆ. 'ಬೆಳಗಾವಿಗೆ ಇವರು ಏನೂ ಮಾಡಿಲ್ಲ, ನಾಚಿಕೆ ಆಗಬೇಕು' ಎಂಬ ಪದ ಬಳಸಿದ್ದಾರೆ. ಅವರು ಇನ್ನೂ ಚಿಕ್ಕ ಹುಡುಗ. ರಾಜಕೀಯ ಮಾಡಲು ಸಾಕಷ್ಟು ವಯಸ್ಸಿದೆ. ಆದರೆ, ದೊಡ್ಡವರ ಬಗ್ಗೆ ಹೇಗೆ ಮಾತನಾಡಬೇಕು ಎಂಬ ಸಂಸ್ಕಾರ ಕಲಿಯಬೇಕು' ಎಂದರು.

'ಲಕ್ಷ್ಮೀ ಹೆಬ್ಬಾಳಕರ ಆರೋಪಿಸಿದರೆ ಸಹಿಸಿಕೊಳ್ಳಬಹುದು. ಆದರೆ, ಅವರ ಮಗ ಕೂಡ ಅವಾಚ್ಯ ಪದ ಬಳಸಿ ಮಾತನಾಡಿದರೆ ಸಹಿಸುವುದು ಹೇಗೆ? ಅವರಂತೆ ನಾನು ಮಾತನಾಡುವುದಿಲ್ಲ. ನನ್ನ ತಂದೆ-ತಾಯಿ ನನಗೆ ಸಂಸ್ಕಾರ ಕಲಿಸಿದ್ದಾರೆ' ಎಂದರು. 1,100 ಕೋಟಿಯ ಸ್ಮಾರ್ಟ್ ಸಿಟಿ ಮಾಡಿದ್ದೇವೆ. ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಮಾಡಿದ್ದೇವೆ. ಈಗ ಹೊಸ ಕಟ್ಟಡವೂ ಮಂಜೂರಾಗಿದೆ. ಶಿಕ್ಷಣಕ್ಕಾಗಿ ಎರಡು ಹೆಚ್ಚುವರಿ ಕೇಂದ್ರೀಯ ವಿಶ್ವವಿದ್ಯಾಲಯ ನಿರ್ಮಿಸಿದ್ದೇವೆ. ನಾನೊಬ್ಬಳೇ 2.73 ಲಕ್ಷ ಕುಟುಂಬಗಳಿಗೆ ಪಿಎಂ ಮುದ್ರಾ ಯೋಜನೆ ಅಡಿ 1,555 ಕೋಟಿ ಸಾಲ ಕೊಡಿಸುವ ಕೆಲಸ ಮಾಡಿದ್ದೇನೆ. 1.89 ಲಕ್ಷ ಕುಟುಂಬಗಳಿಗೆ ರಿಯಾಯಿತಿ ಗ್ಯಾಸ್ ಕೊಟ್ಟಿದ್ದೇವೆ' ಎಂದು ತಿಳಿಸಿದರು.

'ಸುರೇಶ ಅಂಗಡಿ ಅವರು 17 ವರ್ಷಗಳಲ್ಲಿ 16,495 ಕೋಟಿ ವೆಚ್ಚದ ಕಾಮಗಾರಿ ಮಾಡಿಸಿದ್ದಾರೆ. 210 ಕೋಟಿಯಲ್ಲಿ ರೈಲ್ವೆ ನಿಲ್ದಾಣ ಮೇಲ್ದರ್ಜೆಗೆ, ವಿಮಾನ ನಿಲ್ದಾಣ ಎರಡನೇ ಟರ್ಮಿನಲ್, ಪಾಸ್‌ಪೋರ್ಟ್ ಕಚೇರಿ, 927 ಕೋಟಿ ವೆಚ್ಚದ ರೈಲು ಮಾರ್ಗ, 100 ಕೋಟಿಯಲ್ಲಿ ನಾಲ್ಕು ಮೇಲ್ಸೇತುವೆ, 3600 ಕೋಟಿ ವೆಚ್ಚದಲ್ಲಿ ರೈಲ್ವೆ ಡಬ್ಲಿಂಗ್ ಕಾಮಗಾರಿ, ರಿಂಗ್ ರಸ್ತೆ ಮಂಜೂರು ಎಲ್ಲ ಯಾರು ಮಾಡಿದ್ದಾರೆ. ನೀವೇನು ಕಣ್ಣು ಮುಚ್ಚಿಕೊಂಡು ಕುಳಿತಿದ್ದೀರಾ' ಎಂದರು.

# ಲೋಕಸಭಾ ಚುನಾವಣೆ: ಅಭ್ಯರ್ಥಿಗಳ ಖರ್ಚು ವೆಚ್ಚ, ಲೆಕ್ಕಪತ್ರಗಳ ಮಾಹಿತಿ ಸಲ್ಲಿಸಲು ಸೂಚನೆ

ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಜನತಾ ಪ್ರಾತಿನಿಧ್ಯ ಕಾಯ್ದೆ 1951 ರ ಕಲಂ 77 ರ ಪ್ರಕಾರ ಚುನಾವಣಾ ಪ್ರಚಾರ ಅವಧಿಯಲ್ಲಿ ತಮ್ಮ ಚುನಾವಣಾ ಖರ್ಚು-ವೆಚ್ಚಗಳ ಮಾಹಿತಿಯನ್ನು ಕಡ್ಡಾಯವಾಗಿ ಮೂರು ಬಾರಿ ಚುನಾವಣಾ ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.



ಅಭ್ಯರ್ಥಿಗಳು ತಮ್ಮ ಬ್ಯಾಂಕ್ ಪಾಸ್ ಬುಕ್ ಜತೆಗೆ ಖರ್ಚು-ವೆಚ್ಚಗಳ ಲೆಕ್ಕ ಪುಸ್ತಕ, ಎಲ್ಲ ಮೂಲ ರಶೀದಿಗಳನ್ನು ಖುದ್ದಾಗಿ ಅಥವಾ ತಮ್ಮ ಚುನಾವಣಾ ಏಜೆಂಟ್ ಮೂಲಕ ಚುನಾವಣಾ ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕು.

02-ಬೆಳಗಾವಿ ಲೋಕಸಭಾ ಕ್ಷೇತ್ರದ ಚುನಾವಣಾ ಕಣದಲ್ಲಿರುವ ಅಭ್ಯರ್ಥಿಗಳು ಜಿಲ್ಲಾಧಿಕಾರಿ ಕಚೇ-ರಿಯ ಎರಡನೇ ಮಹಡಿಯಲ್ಲಿರುವ ಸಭಾಂಗಣದಲ್ಲಿ ಈ ಕೆಳಕಂಡ ಮೂರು ದಿನಾಂಕಗಳಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯ ಅವಧಿಯಲ್ಲಿ ತಮ್ಮ ಲೆಕ್ಕಪತ್ರಗಳನ್ನು ಪರಿಶೀಲನೆಗೆ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

ಮೊದಲ ಪರಿಶೀಲನೆ-26-4-2024 ಎರಡನೇ ಪರಿಶೀಲನೆ-30-4-2024 ಮೂರನೇ ಪರಿಶೀಲನೆ 04-05-2024

ಎಲ್ಲ ಅಭ್ಯರ್ಥಿಗಳು ನಿಗದಿತ ದಿನಾಂಕಗಳಂದು ಮಾಹಿತಿಯನ್ನು ಸಲ್ಲಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.*

# ಬಿಜೆಪಿಯಿಂದ ಮೊಸಳೆ ಕಣ್ಣೀರು: ಸಚಿವೆ ಹೆಬ್ಬಾಳಕರ

ಬೆಳಗಾವಿ: 'ವಿದ್ಯಾರ್ಥಿನಿ ನೇಹಾ ಕೊಲೆ ಪ್ರಕರಣ ವಿಚಾರದಲ್ಲಿ ಬಿಜೆಪಿಯವರು ಮೊಸಳೆ ಕಣ್ಣೀರು ಸುರಿಸುತ್ತಿದ್ದಾರೆ. ಇದರಲ್ಲೂ ರಾಜಕೀಯ ಮಾಡಲು ಮುಂದಾಗಿರುವುದು ನಾಚಿಕೆಗೇಡಿತನದ ಸಂಗತಿ' ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಲೇವಡಿ ಮಾಡಿದರು.

ಇಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಬಿಜೆಪಿಯವರು ಜಾಣ ಕುರುಡರು. ಜಾಣ ಕಿವುಡರು ಕೂಡ. ಅವರು ತಮಗೆ ಬೇಕೆಂದಾಗ ಮೊಸಳೆ ಕಣ್ಣೀರು ಸುರಿಸುತ್ತಾರೆ. ಬೇಡವಾದಾಗ ಕಿವುಡರಂತೆ ವರ್ತಿಸುತ್ತಾರೆ.

ಈ ಘಟನೆ ವಿರೋಧಿಸಿ ಅವರು ಪ್ರತಿಭಟನೆ



ಮಾಡಲು ಮುಂದಾಗಿರುವುದು ಚುನಾವಣೆ ಕಾರಣಕ್ಕಾಗಿ. ಚುನಾವಣೆ ಮುಗಿದ ಮರುಕ್ಷಣವೇ ಅವರಿಗೆ ನೇಹಾ ಯಾರು ಎಂದೇ ಗೊತ್ತಿರುವುದಿಲ್ಲ' ಎಂದರು.

'ನೇಹಾ ನಮ್ಮ ಮಗಳು. ಇಂಥ ಘಟನೆ ಆಗಬಾರದಿತ್ತು. ಆದರೆ, ದೇಶದಲ್ಲಿ ಇಂತಹ ಪ್ರಕರಣಗಳು ಸಾಕಷ್ಟು ಆಗಿವೆ. ಈ ಬಗ್ಗೆ ತಮ್ಮ ನಿಲುವೇನು ಎಂಬುದನ್ನು ಬಿಜೆಪಿಯವರು ಸ್ಪಷ್ಟಪಡಿಸಬೇಕು' ಎಂದು ಪ್ರಶ್ನಿಸಿದ ಹೆಬ್ಬಾಳಕರ, 'ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆಯಾಗಿ ಸರ್ಕಾರದ ಕಡೆಯಿಂದ ಹೋಗಿ, ನೇಹಾ ಹೆತ್ತವರಿಗೆ ಸಾಂತ್ವನ ಹೇಳಿ ಧೈರ್ಯ ತುಂಬಿ ಬಂದಿದ್ದೇನೆ. ಆರೋಪಿಗೆ ಅತ್ಯಂತ ಕಠಿಣ ಶಿಕ್ಷೆ ಕೊಡಿಸುತ್ತೇವೆ' ಎಂದು ತಿಳಿಸಿದರು.

# ಬಿಜೆಪಿಯವರು ಹೇಳೋದ್ ಒಂದು, ಮಾಡೋದ್ ಒಂದು: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಟೀಕೆ



ಬೈಲಹೊಂಗಲ: ದೇಶದ ಪ್ರಮುಖ ಯೋಜನೆಗಳನ್ನು ಜಾರಿಗೆ ತಂದಿದ್ದು ಕಾಂಗ್ರೆಸ್ ಪಕ್ಷ. ದೇಶದ ಬಡ ಜನರ ಹಸಿವನ್ನ ನೀಗಿಸಿರುವ ಪಕ್ಷ ಕಾಂಗ್ರೆಸ್. ಆದರೆ, ಬಿಜೆಪಿಯವರು ಹೇಳುವುದು ಒಂದು ಮಾಡುವುದು ಒಂದು. ಜನರ ಭಾವನೆಗಳನ್ನು ಕೆರಳಿಸಿ ಅಧಿಕಾರಕ್ಕೇರುವುದೇ ಅವರ ಕೆಲಸ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಆರೋಪಿಸಿದರು.

ಇಂಚಲ ಹಾಗೂ ಚಚಡಿ ಗ್ರಾಮಗಳಲ್ಲಿ ಸೋಮವಾರ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಪ್ರಚಾರ ನಡೆಸಿದ ಸಚಿವರು, ಕೇಂದ್ರ ಸರ್ಕಾರದ ಅಸಹಾಯಕತೆ ನಡುವೆಯೂ ಜನರ ಆಶೋತ್ತರಗಳನ್ನು ನಾವು ಈಡೇರಿಸುತ್ತಿದ್ದೇವೆ ಎಂದು ಹೇಳಿದರು.

ನಾನು ಹೋದ ಕಡೆ ಹೆಚ್ಚಿನ ಮಹಿಳೆಯರು ಪ್ರಚಾರ ಸಭೆಗಳಿಗೆ ಆಗಮಿಸುತ್ತಿದ್ದಾರೆ. ನಿಜಕ್ಕೂ ಇದೊಂದು ಖುಷಿಯ ವಿಚಾರ. ಕೋವಿಡ್ ಬಳಿಕ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನರು ತತ್ತರಿಸಿ ಹೋಗಿದ್ದರು. ಬಡ ಕುಟುಂಬಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಯಿತು. ಕೊಟ್ಟ ಭರವಸೆಯಂತೆ ಅಧಿಕಾರಕ್ಕೆ ಬಂದ ಕೇವಲ 100 ದಿನಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಯಿತು ಎಂದರು.

ಉಚಿತ ವಿದ್ಯುತ್, ಗೃಹಲಕ್ಷ್ಮಿ ಯೋಜನೆಗಳು ಮಹಿಳೆಯರಿಗೆ ತುಂಬಾ ಅನುಕೂಲ ಮಾಡಿಕೊಟ್ಟಿವೆ. ಸಾಮಾಜಿಕ ಕಾಳಜಿ ಹೊಂದಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದರು. ಪ್ರತಿ ತಿಂಗಳು, ಒಂದು ಕುಟುಂಬಕ್ಕೆ 4–5 ಸಾವಿರ ರೂಪಾಯಿ ಉಳಿತಾಯವಾಗುತ್ತಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ನಾವು ಬಿಜೆಪಿಯವರ ಹಾಗೆ ಅಲ್ಲ. ನಾವು ಹೇಳಿದನ್ನೆ ಮಾಡುತ್ತೇವೆ. 2014ರಲ್ಲಿ ಬಿಜೆಪಿಯವರು ಕೊಟ್ಟ ಭರವಸೆಗಳಲ್ಲಿ ಒಂದನ್ನೂ ಈಡೇರಿಸಿಲ್ಲ. ರೈತರ ಆದಾಯ ದುಪ್ಪಟ್ಟು ಆಗಲಿಲ್ಲ. ಬದಲಿಗೆ ಗೊಬ್ಬರದ ಬೆಲೆ, ಸಿಲಿಂಡರ್ ಬೆಲೆ ದುಪ್ಪಟ್ಟಾಯಿತು. ದೇಶದ ಪ್ರಮುಖ ಯೋಜನೆಗಳನ್ನ ಜಾರಿಗೆ ತಂದಿದ್ದು ಕಾಂಗ್ರೆಸ್, ಬಿಜೆಪಿಯವರ ಕೊಡುಗೆ ಶೂನ್ಯ. ಜಾತಿ ಜಾತಿ ನಡುವೆ ವಿಷ ಬೀಜ ಬಿತ್ತೋದೆ ಬಿಜೆಪಿಯವರ ಕೆಲಸ, ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರೈತರ ಸಾಲ ಮನ್ನಾ ಮಾಡಲಾಗುವುದು. ಜೊತೆಗೆ ವರ್ಷಕ್ಕೆ ಒಂದು ಲಕ್ಷ ರೂಪಾಯಿ ನೀಡುವ ಮಹಾಲಕ್ಷ್ಮಿ ಯೋಜನೆಯನ್ನು ಜಾರಿಗೆ ತರಲಾಗುವುದು ಎಂದರು.

ಬೆಳಗಾವಿಯಿಂದ ನಾಲ್ಕು ಬಾರಿ ಬಿಜೆಪಿ ಸಂಸದರು ಆಯ್ಕೆಯಾಗಿದ್ದರೂ ಕ್ಷೇತ್ರಕ್ಕೆ ಯಾವುದೇ ಪ್ರಯೋಜನವಾಗಿಲ್ಲ. ಬೆಳಗಾವಿಯ ಮನೆ ಮಗನಾದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಬೆಂಬಲಿಸಿ, ಗೆಲ್ಲಿಸಬೇಕು. ಕ್ಷೇತ್ರದ ಅಭಿವೃದ್ಧಿಗೆ ಹಗಲಿರುಳು ದುಡಿಯುತ್ತಾನೆ ಎಂದು ಸಚಿವರು ಹೇಳಿದರು.

ಈ ವೇಳೆ ಮಾತನಾಡಿದ ಬೈಲಹೊಂಗಲ ಶಾಸಕ ಮಹಾಂತೇಶ್ ಕೌಜಲಗಿ, ಬಡ ಜನ–ರಿಗೆ ಮಾರಕವಾಗಿರುವ ಕೇಂದ್ರ ಸರ್ಕಾರವನ್ನು ಕಿತ್ತೊಗೆಯಬೇಕು. ವರ್ಷಕ್ಕೆ ಎರಡು ಕೋಟಿ ಉದ್ಯೋಗ ಸೃಷ್ಟಿ ಮಾಡುವುದಾಗಿ ಹೇಳಿದ್ದ ಕೇಂದ್ರ ಸರ್ಕಾರ, ಒಂದೇ ಒಂದು ಉದ್ಯೋಗ ಕೊಡಲಿಲ್ಲ. ಬೆಳಗಾವಿ ಧ್ವನಿಯಾಗಿ ಮೃಣಾಲ್ ಹೆಬ್ಬಾಳ್ಕರ್ ಕೆಲಸ ಮಾಡಲಿದ್ದಾರೆ. ಈ ಬಾರಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಎಂದು ಕರೆ ನೀಡಿದರು.

ಬಳಿಕ ಮಾತನಾಡಿದ ಕಿತ್ತೂರು ಶಾಸಕ ಬಾಬಾ ಸಾಹೇಬ್ ಪಾಟೀಲ್, ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕಾರ್ತಿಕ್ ಪಾಟೀಲ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಂಕರಗೌಡ ಪಾಟೀಲ, ಶಿವರುದ್ರಪ್ಪ ಹಟ್ಟಿಹೊಳಿ, ಗೀತಾ ಬಾಯಿ ದೇಸಾಯಿ ಬಸಪ್ಪ ಮುನವಳ್ಳಿ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

# ನೀರಾವರಿ ಯೋಜನೆ, ಶೈಕ್ಷಣಿಕ ಕ್ಷೇತ್ರಕ್ಕೆ ಬಿಜೆಪಿ ಕೊಡುಗೆ ಏನು ಪ್ರಶ್ನಿಸಿ: ಸಚಿವ ಸತೀಶ್ ಜಾರಕಿಹೊಳಿ



ಕುಡಚಿ: ಬಿಜೆಪಿಯವರು ಅಭಿವೃದ್ಧಿ ಪರ ರಾಜಕೀಯ ಮಾಡಲ್ಲ. ಸುಳ್ಳು ಹೇಳುವುದೇ ಬಿಜೆಪಿಯ ಸಾಧನೆಯಾಗಿದೆ. ನೀರಾವರಿ ಯೋಜನೆ, ಶೈಕ್ಷಣಿಕ ಕ್ಷೇತ್ರಕ್ಕೆ ಬಿಜೆಪಿ ಏನು ಕೊಡುಗೆ ನೀಡಿದೆ ಎಂಬುವುದನ್ನು ನೀವು ಪ್ರಶ್ನಿಸಬೇಕೆಂದು ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಕುಡಚಿ ಪಟ್ಟಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರ ಪರ ಹಮ್ಮಿಕೊಂಡಿದ್ದ ಪ್ರಚಾರಾರ್ಥ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸುಳ್ಳನ್ನ ಎಷ್ಟು ವರ್ಷ ಕೇಳಬೇಕು. ಪ್ರಧಾನಿ ಮೋದಿ ಅವರ ಸುಳ್ಳು ಹೇಳುವುದನ್ನು ಕೇಳಿ, ಕೇಳಿ ಸಾಕಾಗಿದೆ. ಆದ್ದರಿಂದ ಸುಳ್ಳು ಹೇಳುವವರನ್ನು ಮನೆಗೆ ಕಳಿಸುವ ಕೆಲಸ ನೀವು ಮಾಡಬೇಕೆಂದು ಕರೆ ನೀಡಿದರು.

ನಿಮ್ಮ ಕೆಲಸ, ಕಾರ್ಯಗಳಿಗೆ ಸ್ಪಂದಿಸುವ, ಕಷ್ಟ ಕಾಲಕ್ಕೆ ಸಹಾಯ ಮಾಡುವವರನ್ನು ನೀವು ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ ಆಯ್ಕೆ ಮಾಡಬೇಕು. ಕಳೆದ 30 ವರ್ಷಗಳಿಂದ ಬೆಳಗಾವಿ ಜಿಲ್ಲೆ ಸೇರಿದಂತೆ ಚಿಕ್ಕೋಡಿ ಲೋಕಸಭೆ ಕ್ಷೇತ್ರದ ವ್ಯಾಪ್ತಿಯಲ್ಲೂ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದೇವೆ. ಆದ್ದರಿಂದ ಈ ಬಾರಿ ಕಾಂಗ್ರೆಸ್ ಅಭ್ಯಥಿ ಪ್ರಿಯಂಕಾ ಜಾರಕಿಹೊಳಿ ಅವರ ಗೆಲುವಿಗೆ ಶ್ರಮಿಸಿ ಎಂದು ಮನವಿ ಮಾಡಿದರು.

ಪ್ರಿಯಂಕಾ ಜಾರಕಿಹೊಳಿ ಕಳೆದ ಸುಮಾರು ವರ್ಷಗಳಿಂದ ಜನರೊಂದಿಗೆ ಬೆರೆತು ಜನರ ಸಮಸ್ಯೆಗೆ ದನಿ ಆಗುತ್ತಿದ್ದಾರೆ. ಅವರನ್ನು ಚಿಕ್ಕೋಡಿ ಕ್ಷೇತ್ರದಿಂದ ಆಯ್ಕೆ ಮಾಡಿದರೆ ನಮ್ಮ ಪರವಾಗಿ ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸುತ್ತಾರೆ. ನಾವು ಯಾವಾಗಲೂ ನುಡಿದಂತೆ ನಡೆದಿದ್ದೇವೆ. ಕೊಟ್ಟ ಮಾತನ್ನು ಯಾವತ್ತು ತಪ್ಪಿಲ್ಲ ಎಂದರು.

ಮಾಜಿ ಶಾಸಕ ಶ್ಯಾಮ್ ಘಾಟಗೆ ಮಾತನಾಡಿ, ಕುಡಚಿ ಪಟ್ಟಣದ ಜನತೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿಗೆ ಹೆಚ್ಚಿನ ಮತಗಳನ್ನು ನೀಡಿ ಗೆಲ್ಲಿಸಬೇಕು.ನಿಮ್ಮ ಸಮಸ್ಯೆಗಳಿದ್ದರೆ ನಮ್ಮ ಗಮನಕ್ಕೆ ತನ್ನಿ. ಚುನಾವಣೆ ಮುಗಿದ ಬಳಿಕ ನೀರು, ರಸ್ತೆ, ಮನೆಗಳ ಸಮಸ್ಯೆಯನ್ನು ಸಚಿವ ಸತೀಶ್ ಜಾರಕಿಹೊಳಿ ಅವರ ಗಮನಕ್ಕೆ ತಂದು ಪರಿಹರಿಸಲಾಗುವುದು ಎಂದು ಭರವಸೆ ನೀಡಿದರು.

ಇದೇ ವೇಳೆ ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರ್ಪಡೆಯಾದ 20ಕ್ಕೂ ಹೆಚ್ಚು ಕಾರ್ಯಕರ್ತರನ್ನು ಸಚಿವ ಸತೀಶ್ ಜಾರಕಿಹೊಳಿ ಅವರು ಕಾಂಗ್ರೆಸ್ ಪಕ್ಷದ ಶಾಲು ಹೊದಿಸಿ ಸತ್ಕರಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರಾದ ವಿನೋದ ಮಗದುಮ್, ರತ್ನಂಜಯ ಕದ್ದು,ಜೈಯವೀರ ಹುಂಚಿನಮೋರೆ, ಪ್ರೇಮಕುಮಾರ ಬಾಲೋಜಿ, ಕುಮಾರ ಗುಂಡಾಳೆ, ಲಕ್ಷ್ಮಣ ತೇಲಿ, ಚಿದಾನಂದ ಮೋದಿ, ನಾಮದೇವ ನಿಕ್ಕಂ, ಮಹೇಶ ಪಟ್ಟಣಶೆಟ್ಟಿ, ಜೈಕುಮಾರ ಸನದಿ,ಸಂಜು ಗಸ್ತಿ ಶ್ರೀಮಂತ ಗಸ್ತಿ, ಶ್ರೀಮಂತ ನಾಯಕ, ಅಜೀತ್ ಬಸ್ತವಾಡೆ, ಸಂದೀಪ ಗಸ್ತಿ, ಈರಪ್ಪಗಸ್ತಿ, ಅಣ್ಣಾಸಾಬ್ ಸನದಿ, ಅಜೀತ್ ಗಸ್ತಿ, ಮಧುಕರ್ ಸನ್ನಕ್ಕಿ ,ಸರೇಶ ಹೊಸಮನಿ, ಗೋವಿಂದ ಸುತ್ತಾರ ಸೇ–ರಿದಂತೆ ಹಲವಾರು ಮುಖಂಡರು ಇದ್ದರು.

# ಪ್ರೀಮಿಯರ್ ಎನರ್ಜಿಸ್ ಲಿಮಿಟೆಡ್ 1500 ಕೋಟಿ ರೂ ಸಂಗ್ರಹಿಸಲು ಪ್ರಸ್ತಾವನೆ ಸಲ್ಲಿಕೆ

ಹುಬ್ಬಳ್ಳಿ: ಪ್ರೀಮಿಯರ್ ಎನರ್ಜಿಸ್ ಲಿಮಿಟೆಡ್, ಭಾರತದ ಎರಡನೇ ಅತಿ ದೊಡ್ಡ ಇಂಟಿಗ್ರೇಟೆಡ್ ಸೌರ ಕೋಶ ಮತ್ತು ಸೌರ ಮಾಡ್ಯೂಲ್ ತಯಾರಕರು ಫ್ರಾಸ್ಟ್ ಮತ್ತು ಸುಲ್ಲಿವಾನ್ ವರದಿಯ ಪ್ರಕಾರ, ಮಾರ್ಚ್ 31, 2024 ರಂತೆ, ಪ್ರಾಥಮಿಕ ಸಾರ್ವಜನಿಕ ಕೊಡುಗೆ ಮೂಲಕ 1500 ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣ ಸಂಗ್ರಹಿಸಲು ಬಂಡವಾಳ ಮಾರುಕಟ್ಟೆ ನಿಯಂತ್ರಕ ಸೆಬಿಗೆ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಸಲ್ಲಿಸಿದೆ.

ಹೈದರಾಬಾದ್ ಮೂಲದ ಕಂಪನಿಯ ಆರಂಭಿಕ ಸಾರ್ವಜನಿಕ ಕೊಡುಗೆ ಮೂಲಕ 2,82,00,000 ಈಕ್ವಿಟಿ ಷೇರುಗಳನ್ನು ಮಾರಾಟ ಮಾಡುವ ಷೇರುದಾರರಿಂದ ಒಟ್ಟು 1500 ಕೋಟಿ ರೂಪಾಯಿ ಸಂಗ್ರಹಕ್ಕೆ ಮುಂದಾಗಿದೆ.

1995ರಲ್ಲಿ ಅಧ್ಯಕ್ಷ ಮತ್ತು ಪೂರ್ಣಕಾಲಿಕ ನಿರ್ದೇಶಕರಾದ ಸುರೇಂದರ್ ಪಾಲ್ ಸಿಂಗ್ ಸಲುಜಾ ಅವರು ಸ್ಥಾಪಿಸಿದ ಪ್ರೀಮಿಯರ್ ಎನರ್ಜಿಸ್ ಲಿಮಿಟೆಡ್, ಹೊಸ ಸಂಚಿಕೆಯ ನಿವ್ವಳ ಆದಾಯ 1168 ಕೋಟಿ ರೂಪಾಯಿಗಳನ್ನು ತನ್ನ ಅಂಗಸಂಸ್ಥೆಯಾದ ಪ್ರೀಮಿಯರ್ ಎನರ್ಜಿಸ್ ಗ್ಲೋಬಲ್ ಎನ್ವಿರಾನ್ಮೆಂಟ್ ಪ್ರೈವೇಟ್ ಲಿಮಿಟೆಡ್ ನಲ್ಲಿ 4 ಜಿಡಬ್ಲ್ಯು ಸೋಲಾರ್ ಪಿವಿ ಟಾಪ್‌ಕಾನ್ ಸೆಲ್ ಮತ್ತು 4 ಜಿಡಬ್ಲ್ಯು ಸೋಲಾರ್ ಪಿವಿ ಟಾಪ್‌ಕಾನ್ ಮಾಡ್ಯೂಲ್ ಉತ್ಪಾದನಾ ಸೌಲಭ್ಯವನ್ನು ಹೈದರಾಬಾದ್, ತೆಲಂಗಾಣದಲ್ಲಿ ಸ್ಥಾಪಿಸಲು ಭಾಗಶಃ ಹಣಕಾಸು ಒದಗಿಸಲು ಮತ್ತು ಉಳಿದವು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಪ್ರಸ್ತಾವಿಸಿದೆ.

ಸೌರ ಪಿವಿ ಸೆಲ್ಗಳು ಮತ್ತು ಸೌರ ಮಾಡ್ಯೂಲ್ಗಳ ಉತ್ಪಾದನೆ, ಇಪಿಸಿ ಯೋಜನೆಗಳ ಅನುಷ್ಠಾನ, ಸ್ವತಂತ್ರ ವಿದ್ಯುತ್ ಉತ್ಪಾದನೆ, ಕಂಪನಿಯು ಕಾರ್ಯಗತಗೊಳಿಸಿದ ಇಪಿಸಿ ಯೋಜನೆಗಳಿಗೆ ಸಂಬಂಧಿಸಿದಂತೆ ಒ & ಎಂ ಸೇವೆಗಳು ಮತ್ತು ಇತರ ಸೌರ ಸಂಬಂಧಿತ ಉತ್ಪನ್ನಗಳ ಮಾರಾಟದಲ್ಲಿ ತೊಡಗಿರುವ ಕಂಪನಿಯು ಐಪಿಪಿಗಳು, ಒಇಎಂಗಳು ಮತ್ತು ಎನ್ಟಿಪಿಸಿ, ಟಾಟಾ ಪವರ್ ಸೋಲಾರ್ ಸಿಸ್ಟಮ್ಸ್ ಲಿಮಿಟೆಡ್, ಪ್ಯಾನಾಸಾನಿಕ್ ಲೈಫ್ ಸೊಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್, ಕಂಟಿನ್ಯೂಮ್ ಗ್ರೀನ್ ಎನರ್ಜಿ (ಇಂಡಿಯಾ) ಪ್ರೈವೇಟ್ ಲಿಮಿಟೆಡ್, ಶಕ್ತಿ ಪಂಪ್ಸ್ (ಇಂಡಿಯಾ) ಲಿಮಿಟೆಡ್, ಫಸ್ಟ್ ಎನರ್ಜಿ 6 ಪ್ರೈವೇಟ್ ಲಿಮಿಟೆಡ್ (ಥರ್ಮ್ಯಾಕ್ಸ್ ಗ್ರೂಪ್ ಕಂಪನಿ) ಲುಮಿನಸ್ ಪವರ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್, ಹಾರ್ಟೆಕ್ ಸೋಲಾರ್ ಪ್ರೈವೇಟ್ ಲಿಮಿಟೆಡ್, ಗ್ರೀನ್ ಇನ್ಫ್ರಾ ವಿಂಡ್ ಎನರ್ಜಿ ಲಿಮಿಟೆಡ್ (ಸೆಂಬ್ಕಾರ್ಪ್ ಗ್ರೀನ್ ಇನ್ಫ್ರಾ ಲಿಮಿಟೆಡ್ ನ ಅಂಗಸಂಸ್ಥೆ) ಇತ್ಯಾದಿಗಳಲ್ಲಿ ಗ್ರಾಹಕರನ್ನು ಹೊಂದಿದೆ.

ತೆಲಂಗಾಣದ ಹೈದರಾಬಾದ್ ನಲ್ಲಿರುವ ಕಂಪನಿಯ ಒಡೆತನದ ಭೂಮಿಯಲ್ಲಿ ನೆಲೆಗೊಂಡಿರುವ ಐದು ಉತ್ಪಾದನಾ ಸೌಲಭ್ಯಗಳನ್ನು ಹೊಂದಿರುವ ಪ್ರೀಮಿಯರ್ ಎನರ್ಜಿ, ಡಿಸೆಂಬರ್ 31,2023 ಕ್ಕೆ ಕೊನೆಗೊಂಡ ಒಂಬತ್ತು ತಿಂಗಳುಗಳಲ್ಲಿ ಯುನೈಟೆಡ್ ಸ್ಟೇಟ್ಸ್ ಗೆ ಸೌರ ಕೋಶಗಳನ್ನು ರಫ್ತು ಮಾಡುವ ಅತಿದೊಡ್ಡ ಭಾರತೀಯ ಸಂಸ್ಥೆಯಾಗಿದೆ.

ಕಾರ್ಯಾಚರಣೆಯಿಂದ ಕಂಪನಿಯ ಆದಾಯವು 2021 ರ ಹಣಕಾಸು ವರ್ಷ ದಿಂದ 2023 ರ ಹಣಕಾಸು ವರ್ಷದವರೆಗೆ ಸಂಯೋಜಿತ ವಾರ್ಷಿಕ ಬೆಳವಣಿಗೆಯ ದರದಲ್ಲಿ (ಸಿಎಜಿಆರ್) 42.71% ನಷ್ಟು ಹೆಚ್ಚಾಗಿದೆ. 2023 ರ ಹಣಕಾಸು ವರ್ಷದ ಹೊತ್ತಿಗೆ ಅದರ ಕಾರ್ಯಾಚರಣೆಗಳ ಆದಾಯವು ರೂ. 1, 428 ಕೋಟಿ ರೂ. ಆಗಿದ್ದು 2023 ರ ಡಿಸೆಂಬರ್ 31 ಕ್ಕೆ ಕೊನೆಗೊಂಡ ಒಂಬತ್ತು ತಿಂಗಳ ಅವಧಿಗೆ 2,017 ಕೋಟಿ ರೂ. ಆಗಿದೆ. ಮಾರ್ಚ್ 15,2024 ರ ಹೊತ್ತಿಗೆ, ಕಂಪನಿಯು ರೂ. 5, 362 ಕೋಟಿ ರೂಪಾಯಿಗಳ ಆದೇಶವನ್ನು ಹೊಂದಿದೆ.

ಕೋಟಕ್ ಮಹೀಂದ್ರಾ ಕ್ಯಾಪಿಟಲ್ ಕಂಪನಿ ಲಿಮಿಟೆಡ್, ಜೆಪಿ ಮಾರ್ಗನ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಮತ್ತು ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್ ಈ ವಿತರಣೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್ ಗಳಾಗಿವೆ.

# ಬೆಳಗಾವಿ: ಬಿಲ್ ಮಂಜೂರಾತಿ ವಿಚಾರ ಗ್ರಾಪಂ ಅಧ್ಯಕ್ಷ–ಸದಸ್ಯರ ಮಧ್ಯೆ ಮಾರಾಮಾರಿ



ಬೆಳಗಾವಿ: ಬಿಲ್ ಮಂಜೂರಾತಿ ವಿಚಾರವಾಗಿ ಗ್ರಾಪಂ ಅಧ್ಯಕ್ಷ ಹಾಗೂ ಸದಸ್ಯರ ಮಧ್ಯೆ ಮಾರಾಮಾರಿ ನಡೆದಿರುವ ಘಟನೆ ಜಿಲ್ಲೆಯ ಕಿತ್ತೂರು ತಾಲೂಕಿನ ಉಗರಖೋಡ ಗ್ರಾಮದಲ್ಲಿ ನಡೆದಿದೆ.

ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಕರೆಯಲಾಗಿದ್ದ ಸಭೆಯಲ್ಲಿ ಘರ್ಷಣೆ ನಡೆದಿದೆ. ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಸದಸ್ಯರು ಕೊಳವೆಬಾವಿ ಕೊರಿಸಿದ್ದರು.

ಆದರೆ ಬಿಲ್ ಮಂಜೂರಾತಿಗೆ ಅಧ್ಯಕ್ಷ ಒಪ್ಪಿಗೆ ನೀಡದ ಹಿನ್ನೆಲೆ ಸದಸ್ಯರು ವಾಗ್ವಾದ ನಡೆಸಿದ್ದಾರೆ. ಇದು ವಿಕೋಪಕ್ಕೆ ತಿರುಗಿ ಸದಸ್ಯರು ಹಾಗೂ ಅಧ್ಯಕ್ಷರ ಮಧ್ಯೆ ಮಾರಾಮಾರಿ ನಡೆದಿದೆ.

ಗಲಾಟೆಯ ದೃಶ್ಯ ಪಂಚಾಯಿತಿಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

# ಹುಕ್ಕೇರಿ ಶ್ರೀಗಳ ಆಶೀರ್ವಾದ ಪಡೆದ ರಾಹುಲ್ ಜಾರಕಿಹೊಳಿ



ಬೆಳಗಾವಿ: ಹುಕ್ಕೇರಿ ನಗರದಲ್ಲಿನ ಶ್ರೀ ಗುರುಶಾಂತೇಶ್ವರ ಸಂಸ್ಥಾನದ ಹಿರೇಮಠಕ್ಕೆ ಸತೀಶ್ ಶುಗರ್ಸ್ ನಿರ್ದೇಶಕ, ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಭೇಟಿ ನೀಡಿ ಶ್ರೀ ಷ. ಬ್ರ. ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳ ಆಶೀರ್ವಾದ ಪಡೆದರು.

ಹುಕ್ಕೇರಿ ಶ್ರೀಗಳ ಆಶೀರ್ವಾದ ಪಡೆದು ನಂತರ ಮಾತನಾಡಿದ ಯುವ ನಾಯಕ ರಾಹುಲ್ ಜಾರಕಿಹೊಳಿ, ಹುಕ್ಕೇರಿ ನಗರದಲ್ಲಿನ ಶ್ರೀ ಗುರುಶಾಂತೇಶ್ವರ ಸಂಸ್ಥಾನದ ಹಿರೇಮಠಕ್ಕೆ ಸರ್ವ ಧರ್ಮಿಯರು ನಿಷ್ಠೆಯಿಂದ ಬಂದು ಭಕ್ತಿ ಸಮರ್ಪಣೆ ಮಾಡುತ್ತಾರೆ.

ಶ್ರೀಗಳು ಎಲ್ಲಾ ಧರ್ಮ–ಜಾತಿ–ದವರನ್ನು ಸೇರಿಸಿ ಅವರಿಗೆ ಧರ್ಮ ಸಂದೇಶವನ್ನು ನೀಡುತ್ತಿರುವುದು ಸಂತಸದ ವಿಷಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಯುವ ಮುಖಂಡ ರೀಷಭ ಪಾಟೀಲ್ ಸೇರಿದಂತೆ ಹಲವು ಮುಖಂಡರು ಇದ್ದರು.

# ಸಮಗ್ರ ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ



ಬೆಳಗಾವಿ: ಚಿಕ್ಕೋಡಿ ಲೋಕಸಭೆಯ ಸಮಗ್ರ ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಬೇಕು ಎಂದು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮತದಾರರಲ್ಲಿ ಮನವಿ ಮಾಡಿದರು.

ರಾಯಬಾಗ ತಾಲೂಕಿನ ಕುಡಚಿ ಮತಕ್ಷೇತ್ರದ ಕುಡಚಿ ಗ್ರಾಮೀಣ ಹಾಗೂ ಆಲಖನೂರ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮತಯಾಚಿಸಿ, ಮಾತನಾಡಿದ ಅವರು, ಚಿಕ್ಕೋಡಿ ಲೋಕಸಭೆ ಕ್ಷೇತ್ರವನ್ನು ಅಭಿವೃದ್ಧಿಗೊಳಿಸುವುದೇ ನನ್ನ ಕನಸಾಗಿದೆ ಎಂದು ತಿಳಿಸಿದರು.

ವಿಧಾನಸಭೆ ಚುನಾವಣೆಯಲ್ಲಿ ಕುಡಚಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಮತಗಳನ್ನು ನೀಡಿದ್ದೀರಿ. ಅದೇ ರೀತಿ ಲೋಕಸಭೆ ಚುನಾವಣೆಯಲ್ಲಿಯೂ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ನನಗೆ ಹೆಚ್ಚಿನ ಮತಗಳನ್ನು ನೀಡಿ ಬಹು ಅಂತರದಿಂದ ಗೆಲ್ಲಿಸಬೇಕು. ಕಾಂಗ್ರೆಸ್ ಎಲ್ಲಾ ಸಮುದಾಯದ ಹಿತವನ್ನು ಬಯಸಿದೆ, ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ನುಡಿದಂತೆ ನಡೆಯುವ ಮೂಲಕ ಜನರ ಮನಸ್ಸು ಗೆದ್ದಿದೆ. ಹೀಗಾಗಿ ಮುಂಬರುವ ಚಿಕ್ಕೋಡಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನಿಮ್ಮ ಮಗಳನ್ನು ಗೆಲ್ಲಿಸಿ ಆಶೀರ್ವದಿಸಬೇಕು ಎಂದು ಮನವಿ ಮಾಡಿದರು.

ಕಳೆದ ಹಲವಾರು ವರ್ಷಗಳಿಂದ ಬೆಳಗಾವಿ ಜಿಲ್ಲೆಯಲ್ಲಿ ಸಾಮಾಜಿ–ಕ, ಶೈಕ್ಷಣಿಕ ಪ್ರಗತಿಗಾಗಿ ಅನೇಕ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಸರ್ವ ಸಮಾಜದ ಅಭಿವೃದ್ಧಿಗೆ ಶ್ರಮಿಸುತ್ತಿದೇನೆ.

ಇನ್ನು ಎಸ್‌ಎಸ್‌ಎಲ್‌ಸಿ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಸತೀಶ್ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಬೆಳಗಾವಿ ಜಿಲ್ಲೆಯ 58 ಸಾವಿರ ವಿದ್ಯಾರ್ಥಿಗಳಿಗೆ "ಗೆಲುವಿನತ್ತ ನಮ್ಮ ಪಯಣ" ಎಂಬ ಪರೀಕ್ಷೆಗೆ ಅನುಕೂಲವಾಗುವ ಕೈಪಿಡಿಗಳನ್ನು ವಿತರಿಸಿದ್ದೇವೆ ಎಂದರು.

ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ ಆಯ್ಕೆಯಾಗಲು ಕುಡಚಿ ಮತಕ್ಷೇತ್ರದಿಂದಲೂ ಹೆಚ್ಚಿನ ಮತಗಳನ್ನು ನೀಡುವ ಮೂಲಕ ಆಶೀರ್ವದಿಸಿ, ನಿಮ್ಮ ಭಾಗದ, ನಿಮ್ಮ ಸಮಸ್ಯೆಗಳಿಗೆ ಸದಾ ಸ್ಪಂದಿಸುತ್ತೇನೆಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಗ್ರಾಮಕ್ಕೆ ಆಗಮಿಸಿದ ಚಿಕ್ಕೋಡಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಮಹಿಳೆಯರು ಹೂ ಮಾಲೆ ಹಾಕು ಮೂಲಕ ಅದ್ದೂರಿ ಸ್ವಾಗತ ಕೋರಿದರು.

ಈ ವೇಳೆ ಕುಡಚಿ ಶಾಸಕ ಮಹೇಂದ್ರ ತಮ್ಮನ್ನವರ್, ಕಾಂಗ್ರೆಸ್ ಮುಖಂಡರಾದ ಅಮೀತ್ ಘಾಟಗೆ, ಬೆಳಗಾವಿ ಗ್ರಾಮೀಣ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷ ಕಲ್ಪನಾ ಜೋಶಿ ಸೇರಿದಂತೆ ಮುಸ್ಲಿಂ ಸಮಾಜದ ಮುಖಂಡರು, ಅಪಾರ ಸಂಖ್ಯೆಯ ಕಾರ್ಯಕರ್ತರು, ಮಹಿಳೆಯರು, ಯುವಕರು ಇದ್ದರು.

# ಪ್ರಿಯಂಕಾ ಜಾರಕಿಹೊಳಿಗೆ ಚಿಕ್ಕೋಡಿ ಜನತೆ ಬೆಂಬಲ ನೀಡಿ




ಬೆಳಗಾವಿ: ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಚಿಕ್ಕೋಡಿ ಜನತೆ ಬೆಂಬಲ ನೀಡಬೇಕು. ಅವರನ್ನು ಆಯ್ಕೆಮಾಡಿ ಲೋಕಸಭೆಗೆ ಕಳಿಸಬೇಕು ಎಂದು ಕೆಪಿಸಿಸಿ ಉಪಾಧ್ಯಕ್ಷರಾದ ಎಲ್ ಹನುಮಂತಯ್ಯ ಅವರು ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಮಾತನಾಡಿದ ಅವರು, ಬೆಳಗಾವಿ ಎರಡು ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಬೇಕು, ಬೆಳಗಾವಿ ಜನತೆ ಅಪಾರ ಬೆಂಬಲ ನೀಡಬೇಕು ಎಂದು ಮನವಿ ಮಾಡಿಕೊಂಡ ಅವರು, ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ಗೆದ್ದರೆ ಅದು ಪ್ರಜಾಪ್ರಭುತ್ವ ವ್ಯವಸ್ಥೆ ವಿಕ್ ಆಗಲಿದೆ. ದೇಶದಲ್ಲಿ ವಿಪಕ್ಷ ಇರಬಾರದು ಎಂದು ಬಿಜೆಪಿ ಅಜೆಂಡಾ ಆಗಿದೆ. ಹೀಗಾಗಿ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕರನ್ನು ಬಿಜೆಪಿ ಟಾರ್ಗೆಟ್ ಮಾಡಿದೆ. ಹೀಗಾಗಿ ಎಲ್ಲವನ್ನೂ ಗಮನದಲ್ಲಿಟ್ಟಿಕೊಂಡು ಮತದಾರರು ಎಚ್ಚರಿಕೆ ಮತದಾನ ಮಾಡಬೇಕು ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳು ಜನರನ್ನು ಸೊಮಾರಿಯಾಗಿಸುತ್ತಿದೆ ಎಂದು ಬಿಜೆಪಿಯವರು ಹೇಳುತ್ತಿದ್ದಾರೆ. ಈ ಗ್ಯಾರಂಟಿಗಳಿಂದ ರಾಜ್ಯದ ಜನತೆ ಉತ್ತಮ ಭವಿಷ್ಯ ರೂಪಿಸಿಕೊಳ್ಳುತ್ತಿದ್ದಾರೆ. ಅವರು ಶ್ರೀಮಂತ ಪರವಾಗಿದ್ದಾರೆ ಹೀಗಾಗಿ ಬಡವರ ಕಾಳಜಿ ಇಲ್ಲ. ಶ್ರೀಮಂತ, ದೊಡ್ಡ ಕಂಪನಿಗಳ 10 ಲಕ್ಷ ಕೋಟಿ.ರೂ ಮನ್ನಾ ಮಾಡಿದೆ. ಆದರೆ, ಅನ್ನದಾತರ ನೈಯಾ ಪೈಸೆ ಹಣವನ್ನು ಮೋದಿ ಸರ್ಕಾರ ಮನ್ನಾ ಮಾಡಿಲ್ಲ ಎಂದು ವಾಗ್ದಾಳಿ ನಡೆಸಿದರು.

ವಿಕಸಿತ ಭಾರತ ಶ್ರೀಮಂತ ಪರ ಇದೆ. ಬಡವರ ಪರ ಸರ್ಕಾರದ ಅಲ್ಲ. ಮೋದಿ ಯನ್ನು ಸರ್ಕಾರವನ್ನು ಬದಲಾಯಿಸಬೇಕಿದೆ. ದೇಶದಲ್ಲಿ ಹೊಸ ಬದಲಾವಣೆ ತರಬೇಕಾಗಿದೆ. ಯುವಕ–ರಿಗೆ ಪ್ರೋತ್ಸಾಹ ನೀಡಬೇಕಿದ್ದ ಕೇಂದ್ರ ಉದ್ಯೋಗ ನೀಡದೆ ಬೀದಿಗೆ ತರುತ್ತಿದೆ. ದೇಶದಲ್ಲಿ ರೈತರ ಸಾವಿನ ಬಗ್ಗೆ ಕೇಂದ್ರ ಧ್ವನಿ ಎತ್ತಿಲ್ಲಲ, ಹೀಗಾಗಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಡಾ. ಸ್ವಾಮಿನಾಥನ ವರದಿ ಜಾರಿಗೆ ತಂದು ರೈತರಿಗೆ ಬೆಂಬಲ ಬೆಲೆ ನೀಡಲಾಗುವುದು ಎಂದು ಹೇಳಿದರು.

# ಕೆಎಲ್ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ವತಿಯಿಂದ ಉಚಿತ ಆರೋಗ್ಯ ತಪಾಸನಾ ಶಿಬಿರ



ಖಾನಾಪುರ: ಸಾರ್ವಜನಿಕರ ಆರೋಗ್ಯ ಸೇವೆಗೆ ಕೆ ಎಲ್ ಇ ಸಂಸ್ಥೆ ಯಾವತ್ತೂ ಸಿದ್ದ ಎಂದು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಜನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ. ಶ್ರೀನಿವಾಸ ಬಿ ಅವರು ಮಾತನಾಡುತ್ತಿದ್ದರು. ಅವರು ಶನಿವಾರ 20ನೇ ಏಪ್ರಿಲ್ 2024 ರಂದು ಕೆ ಎಲ್ ಇ ಶತಮಾನೋತ್ಸವ ಚಾ–ರಿಟೆಬಲ್ ಆಸ್ಪತ್ರೆ ಹಾಗೂ ಗುಂಜಿ ಗ್ರಾಮದ ಸಂಕಲ್ಪ ಫೌಂಡೇಶನ್ ನ ಸಂಯುಕ್ತಾಶ್ರಯದಲ್ಲಿ ನಡೆದ ಉಚಿತ ಆರೋಗ್ಯ ತಪಾಸನಾ ಶಿಬಿರವನ್ನು ಉದ್ಘಾಟಿಸುತ್ತ ಮಾತನಾಡುತ್ತಿದ್ದರು. ಆರೋಗ್ಯ ಸೇವೆಗಳು ಕೇವಲ ನಗರಗಳಿಗಷ್ಟೇ ಸೀಮಿತವಾಗಬಾರದು ಪ್ರತಿಯೊಂದುಗ್ರಾಮಕ್ಕೂ ಪ್ರತಿಯೊಂದು ಮನೆಗೂ ಮುಟ್ಟಬೇಕು ಎಂಬ ಮಹದುದ್ದೇಶದಿಂದ ಕೆ ಎಲ್ ಇ ಸಂಸ್ಥೆಯು ಈಗಾಗಲೆ ಕಾರ್ಯೋನ್ಮುಖವಾಗಿದೆ. ಈ ನಿಟ್ಟಿನಲ್ಲಿ ಗುಂಜಿ ಗ್ರಾಮದಲ್ಲಿಯೂ ಸಹ ಇಂದು ಉಚಿತ ಆರೋಗ್ಯ ತಪಾಸನಾ ಶಿಬಿರವನ್ನು ಹಮ್ಮಿಕೊಳ್ಳಲಾಗುತ್ತಿದೆ ಆದ–ದ್ದರಿಂದ ಈ ಶಿಬಿರದ ಸದುಪಯೋಗ ಪಡೆದುಕೊಂಡು ಆರೋಗ್ಯವಂತರಾಗಿರಿ ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಂಗವಾಗಿ ಮಾತನಾಡಿದ ಸಂಕಲ್ಪ ಫೌಂಡೇಷನ್ ನ ಅಧ್ಯಕ್ಷ ಶ್ರೀ ರಾಜು ಬರಗುರಕರ ಕರ್ನಾಟಕ ರಾಜ್ಯದ ಗಡಿ ಭಾಗಗಳಿಗೆ ಹೊಂದಿಕೊಂಡಿರುವ ನಮ್ಮ ಗ್ರಾಮಗಳು ಸರಿಯಾದ ಆರೊಗ್ಯ ಸೇವೆಗಳಿಂದ ದೂರವಾಗಿವೆ. ಆದ–ರೆ ಕೆ ಎಲ್ ಇ ಸಂಸ್ಥೆಯಂತಹ ಉನ್ನತ ವಿಚಾರಗಳನ್ನು ಹೊಂದಿರುವ ಶಕ್ತಿಗಳು ನಮ್ಮ ಬಾಗದ ಗ್ರಾಮಗಳಿಗೆ ಆರೋಗ್ಯ ಸೇವೆಗಗಳನ್ನು ಒದಗಿಸುತ್ತಿರುವದು ಅಭಿನಂದನಾರ್ಹವಾಗಿದೆ. ಈ ನಿಟ್ಟಿನಲ್ಲಿ ಕೆ ಎಲ್ ಇ ಸಂಸ್ಥೆಯ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಜೊತೆಗೂಡಿ ನಮ್ಮ ಈ ಭಾಗದ ಜನರಿಗೆ ಆರೋಗ್ಯ ಸೇವೆ ಸಿಗುವಂತೆ ಮಾಡಲು ನಮ್ಮ ಸಂಸ್ಥೆ ಸದಾ ಸಿದ್ದವಾಗಿರುತ್ತದೆ ಎಂದು ಮಾತನಾಡುತ್ತಿದ್ದರು. ಶಿಬಿರದಲ್ಲಿ ಕೆ ಎಲ್ ಇ ಶತಮಾನೋತ್ಸವ ಚಾ–ರಿಟೆಬಲ್ ಆಸ್ಪತ್ರೆಯ ಜನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ. ಶ್ರೀನಿವಾಸ ಬಿ ಅವರು, ಚಿಕ್ಕಮಕ್ಕಳ ವೈದ್ಯರಾದ ಡಾ. ಸಂತೋಷಕುಮಾರ ಕರಮಸಿ, ಎಲುಬು ಕೀಲು ವೈದ್ಯ ಡಾ.ಆನಂದಕುಮಾರ ಖಟವಿ ಹಾಗೂ ವೈದ್ಯಾಧಿಕಾರಿ ಡಾ. ಕಡೋಲ್ಕರ, ಡಾ. ಕೆನ್ನಿ ಅರುಲ್ ಮತ್ತು ತಂಡದವರು ಗುಂಜಿ ಗ್ರಾಮದ ಗ್ರಾಮಸ್ಥರಿಗೆ ಆರೋಗ್ಯ ತಪಾಸಣೆ ಮಾಡಿ ಔಷಧ ವಿತರಿಸಿದರು.

ಶಿಬಿರದಲ್ಲಿ 273 ನಾಗರಿಕರನ್ನು ತಪಾಶಿಸಲಾಯಿತು.ಅದರಲ್ಲಿ 110 ಜನರಿಗೆ ಮೆಡಿಸಿನ ವಿಭಾಗದ ವೈದ್ಯರು ತಪಾಸಣೆ ಮಾಡಿ 15 ಜನರಿಗೆ ಅತಿರಕ್ತದೊತ್ತಡ, 8 ಜನರಿಗೆ ಮಧುಮೇಹದ ಸಮಸ್ಯೆ, 65 ಜನರಿಗೆ ಎಲುಬು ಕೀಲು ವೈದ್ಯರಿಂದ ತಪಾಸಣೆ ಮಾಡಲಾಗಿ ಅದರಲ್ಲಿ 12 ಜನರಿಗೆ ಸಂಧಿವಾತ ಮತ್ತಿತರೆ ಸಮಸ್ಯೆಗಳಿರುವದು ತಿಳಿದುಬಂದಿತು, 65 ಜನರಿಗೆಕಣ್ಣಿನ ವೈದ್ಯರು ತಪಾಸಣೆ ಮಾಡಲಾಗಿಅದರಲ್ಲಿ 26 ಜನರಿಗೆ ಮೋತಿಬಿಂದು ಮತ್ತಿತರೆ ಸಮಸ್ಯೆಗಳಿರುವದು ತಿಳಿದುಬಂದಿತು, ಚಿಕ್ಕಮಕ್ಕಳ ವೈದ್ಯರು 45 ಮಕ್ಕಳನ್ನು ತಪಾಸಣೆ ಮಾಡಿದರು. ಅದರಲ್ಲಿ 4 ಮಕ್ಕಳಿಗೆ ಅಪೌಷ್ಟಿಕತೆ ಮತ್ತಿತರೆ ಸಮಸ್ಯೆಗಳಿರುವದು ತಿಳಿದುಬಂದಿತು. ಈ ಎಲ್ಲ ನಾಗರಿಕರಿಗೆ ಆಸ್ಪತ್ರೆಯ ಅತ್ಯಲ್ಪದರದ ಸೇವೆಗಳನ್ನು ಉಪಯೋಗಿಸಿಕೊಳ್ಳಲು ಆಸ್ಪತ್ರೆಯ ನಿರ್ದೇಶಕರಾದ ಡಾ.ಎಸ್ ಸಿ ಧಾರವಾಡ ಅವರು ಸೂಚಿಸಿದ್ದಾರೆ.

## ಮೆಹಂದಿ ಮೂಲಕ ಮತದಾನ ಜಾಗೃತಿ



ಹುಕ್ಕೇರಿ: ಮಹಿಳಾ ಕಲ್ಯಾಣ ಸಂಸ್ಥೆ, ಬೆಳಗಾವಿ, ಎಪ್ ವಿ ಟಿ ಆರ್ ಎಸ್ ಸಂಸ್ಥೆ, ಬೆಂಗಳೂರು ಹಾಗೂ ನಮ್ಮೂರ ಬಾನುಲಿ ಸಮುದಾಯ ರೇಡಿಯೋ ಕೇಂದ್ರ ಯಲ್ಲಾಪೂರ–ಕರಗುಪ್ಪಿ ಇವರ ಸಹಯೋಗದಲ್ಲಿ ನಮ್ಮೂರ ಬಾನುಲಿ ಸಮುದಾಯ ರೇಡಿಯೋ ಕೇಂದ್ರದಲ್ಲಿ ಮೆಹಂದಿ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಹಿಳಾ ಕಲ್ಯಾಣ ಸಂಸ್ಥೆಯ ಗೌರವ ಕಾರ್ಯದರ್ಶಿ ವೈಜಯಂತಿ ಚೌಗಲಾ ಮಾತನಾಡಿ ಕಡ್ಡಾಯವಾಗಿ ಮತದಾನ ಮಾಡುವುದು ಅವಶ್ಯಕವಾಗಿದೆ ದೇಶದಲ್ಲಿ ಉತ್ತಮ ಆಡಳಿತವನ್ನು ಪಡೆಯಬೇಕಾದರೆ ಪ್ರತಿಯೊಬ್ಬರು ಮತದಾನ ಮಾಡಬೇಕು.

ನಾನ ಒಬ್ಬ ಮತದಾನ ಮಾಡದಿದ್ದರೆ ಏನಾಗುತ್ತೆ ಅನ್ನೋ ಮನೋಭಾವ ಬಿಟ್ಟು ನಮ್ಮ ಒಂದು ಮತದಾನದಿಂದ ದೇಶದ ಭವಿಷ್ಯ ನಿರ್ಧಾರವಾಗುತ್ತದೆ ಆದ್ದರಿಂದ ಪ್ರತಿಯೊಬ್ಬರು ಮತದಾನ ಮಾಡಿ ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಎಪ್ ವಿ ಟಿ ಆರ್ ಎಸ್ ಸಂಸ್ಥೆಯ ಕ್ಷೇತ್ರ ಸಂಯೋಜಕ ಬಸವರಾಜ ಮಣ್ಣಿಕೇರಿ ಉಪಸ್ಥಿತರಿದ್ದರು 35 ಕ್ಕೂ ಹೆಚ್ಚಿನ ಮಹಿಳೆಯರು ಮೆಹಂದಿ ಮೂಲಕ ಜಾಗೃತಿ ಮೂಡಿಸಿದರು.

## ಅಭ್ಯರ್ಥಿಗಳು ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸಿ: ಚುನಾವಣಾ ವೀಕ್ಷಕರಾದ ಜಿ.ಎಸ್.ಪಾಂಡಾ ದಾಸ್

ಬೆಳಗಾವಿ: ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಅಂತಿಮವಾಗಿ ಕಣದಲ್ಲಿರುವ ಎಲ್ಲ ಅಭ್ಯರ್ಥಿಗಳು ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಸಾಮಾನ್ಯ ವೀಕ್ಷಕರಾಗಿ ನಿಯೋಜಿತರಾದ ಜಿ. ಎಸ್.ಪಾಂಡಾ ದಾಸ್ ಅವರು ಅಭ್ಯರ್ಥಿಗಳಿಗೆ ತಿಳಿಸಿದರು.

ಚಿಕ್ಕೋಡಿ ಉಪ ವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ (ಏ.22) ರಂದು ಜರುಗಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಅಂತಿಮ ಕಣದಲ್ಲಿರುವ ಅಭ್ಯರ್ಥಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಚುನಾವಣಾ ಪ್ರಚಾರಕ್ಕೆ ಬಳಸಲಾಗುವ ವಾಹನಗಳ ಪರವಾನಿಗೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು. ವಾಹನಗಳ ಪರವಾನಿಗೆ ಪಡೆಯಲು




ಸುವಿಧಾ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು. ಧಾರ್ಮಿಕ ಸ್ಥಳಗಳಲ್ಲಿ ಚುನಾವಣಾ ಪ್ರಚಾರ ಸಭೆಗಳನ್ನು ಆಯೋಜಿಸಬಾರದು. ಒಟ್ಟಾರೆಯಾಗಿ ಅಭ್ಯರ್ಥಿಗಳು ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ನಿಗಾವಹಿಸಬೇಕು. ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ದೂರು, ಸಂದೇಹಗಳಿದ್ದರೆ ತಮ್ಮನ್ನು ಸಂಪರ್ಕಿಸಲು ವೀಕ್ಷಕರಾದ ಜಿ. ಎಸ್.ಪಾಂಡಾ ದಾಸ್ ಅವರು ತಿಳಿಸಿದರು.

ವೆಚ್ಚ ವೀಕ್ಷಕರಾದ ಎನ್. ಮೋಹನಕೃಷ್ಣ ಹಾಗೂ ಅಂಕಿತ ತಿವಾರಿ ಅವರುಗಳು ಮಾತನಾಡಿ ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆ ನಡೆಸುವದು ಮುಖ್ಯವಾಗಿದೆ. ಅಭ್ಯರ್ಥಿಗಳು ದೈನದಂದಿನವಾಗಿ ತಮ್ಮ ಚುನಾವಣಾ ಖರ್ಚು ವೆಚ್ಚಗಳನ್ನು ರಜಿಸ್ಟರನಲ್ಲಿ ದಾಖಲಿಸಬೇಕು.

ಈ ಕುರಿತು ಅಭ್ಯರ್ಥಿಗಳಿಗೆ ತರಬೇತಿಯನ್ನು ನೀಡಲಾಗುವುದು ಎಂದರು.

ಅಭ್ಯರ್ಥಿಗಳು ಚುನಾವಣಾ ಪ್ರಚಾರ ಅವಧಿಯಲ್ಲಿ ತಮ್ಮ ಚುನಾವಣಾ ಖರ್ಚು–ವೆಚ್ಚಗಳ ಮಾಹಿತಿಯನ್ನು ಕಡ್ಡಾಯವಾಗಿ ಮೂರು ಬಾರಿ ಚುನಾವಣಾ ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕು. ಪ್ರಚಾರ ಸಭೆ, ಪ್ರಚಾರಕ್ಕಾಗಿ ಬಳಸಲಾಗುವ ವಾಹನಗಳ ಅನುಮತಿ ಪಡೆಯುವದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿದರು.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ಮಾತನಾಡಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಅಂತಿಮವಾಗಿ ಕಣದಲ್ಲಿರುವ ಅಭ್ಯರ್ಥಿಗಳಿಗೆ ಚಿಹ್ನೆಗಳನ್ನು ನೀಡಲಾಗಿರುತ್ತದೆ. ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ಸೂಕ್ಷ್ಮ ಹಾಗೂ ಅತೀ ಸೂಕ್ಷ್ಮ ಮತಗಟ್ಟೆಗಳಿಗೆ ಹೆಚ್ಚಿನ ಆದ್ಯತೇ ನೀಡಲಾಗುತ್ತಿದೆ. ಮತಗಟ್ಟೆಗಳ ಕುರಿತು ಅಭ್ಯರ್ಥಿಗಳಲ್ಲಿ ಸಂದೇಹಗಳಿದ್ದಲ್ಲಿ ಅಂತಹ ಮತಗಟ್ಟೆಗಳ ವಿವರಗಳನ್ನು ಒದಗಿಸಿದಲ್ಲಿ ಈ ಕು–ರಿತು ಪರಿಶೀಲಿಸಿ ಮುಂದಿನ ಅಗತ್ಯದ ಕ್ರಮ ಕೈಗೊಳ್ಳಲಾಗುವದು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ತಿಳಿಸಿದರು.

ಸಭೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಅಂತಿಮವಾಗಿ ಕಣದಲ್ಲಿರುವ ಅಭ್ಯರ್ಥಿಗಳು ಉಪಸ್ಥಿತ–ರಿದ್ದರು.

## ಲೋಕಸಭಾ ಚುನಾವಣೆ:
### ಅಭ್ಯರ್ಥಿಗಳ ಖರ್ಚು–ವೆಚ್ಚ, ಲೆಕ್ಕಪತ್ರಗಳ ಮಾಹಿತಿ ಸಲ್ಲಿಸಲು ಸೂಚನೆ

ಬೆಳಗಾವಿ: ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಚುನಾವಣಾ ಪ್ರಚಾರ ಅವಧಿಯಲ್ಲಿ ತಮ್ಮ ಚುನಾವಣಾ ಖರ್ಚು–ವೆಚ್ಚಗಳ ಮಾಹಿತಿಯನ್ನು ಕಡ್ಡಾಯವಾಗಿ ಮೂರು ಬಾರಿ ಚುನಾವಣಾ ವೆಚ್ಚ ವೀಕ್ಷಕ–ರಿಗೆ ಸಲ್ಲಿಸಬೇಕು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ತಿಳಿಸಿದ್ದಾರೆ.

01–ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾ ಕಣದಲ್ಲಿರುವ ಅಭ್ಯರ್ಥಿಗಳು ಚುನಾವಣಾಧಿಕಾರಿಗಳ ಕಾರ್ಯಾಲಯ, ಬಸವ ಸರ್ಕಲ್, ತಾಲೂಕು ಆಡಳಿತ ಸೌಧ, ಚಿಕ್ಕೋಡಿ ಇಲ್ಲಿ ಈ ಕೆಳಕಂಡ ಮೂರು ದಿನಾಂಕಗಳಂದು ಬೆಳಿಗ್ಗೆ 11 ಗಂಟೆಗೆ ತಮ್ಮ ಲೆಕ್ಕಪತ್ರಗಳನ್ನು ಪರಿಶೀಲನೆಗೆ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

- ಮೊದಲ ಪರಿಶೀಲನೆ– 26–4–2024
- ಎರಡನೇ ಪರಿಶೀಲನೆ–30–4–2024
- ಮೂರನೇ ಪರಿಶೀಲನೆ 04–05–2024

ಎಲ್ಲ ಅಭ್ಯರ್ಥಿಗಳು ನಿಗದಿತ ದಿನಾಂಕಗಳಂದು ಮಾಹಿತಿಯನ್ನು ಸಲ್ಲಿಸಬೇಕು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹುಕ್ಕೇರಿ: ಮತದಾರರಿಗೆ ಓಟರ್ ಸ್ಲೀಪ್ ವಿತರಣೆ



ಹುಕ್ಕೇರಿ: ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ ತಾಲೂಕಿನ ಯಾದಗೂಡ ಗ್ರಾಮದಲ್ಲಿ ಸೋಮವಾರ ಮತದಾರರಿಗೆ ವೋಟರ್ ಸ್ಲೀಪ್ ಮತ್ತು ಮತದಾನ ತಿಳುವಳಿಕೆ ಕರಪತ್ರಗಳನ್ನು ವಿತ–ರಿಸಲಾಯಿತು.

ಚುನಾವಣಾಧಿಕಾರಿಯೂ ಆದ ಜಿಲ್ಲಾ ಪಂಚಾಯಿತಿ ಸಿಇಒ ರಾಹುಲ ಶಿಂಧೆ ಅವರು ಮತದಾರರಿಗೆ ಓಟರ್ ಸ್ಲೀಪ್ ಮತ್ತು ಮತದಾನ ಜಾಗೃತಿ ಮೂಡಿಸುವ ಕರಪತ್ರ ವಿತರಿಸಿ ಮಾತನಾಡಿ, ಬರುವ ಮೇ.7 ರಂದು ಮತಗಟ್ಟೆಗೆ ಹೋಗಿ ಮತ ಚಲಾವಣೆ ಮಾಡಬೇಕು.

ಪ್ರಜಾಪ್ರಭುತ್ವ ಹಬ್ಬದಲ್ಲಿ ಮತದಾನ ಮಾಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ. ಯಾರು ಮತದಾನದಿಂದ ಹೊರಗೆ ಉಳಿಯಬಾರದು.

ಬಿಎಲ್‌ಓಗಳು ಪ್ರತಿ ಮನೆಗೆ ವೋಟ–ರ್ ಸ್ಲೀಪಗಳನ್ನು ವಿತರಿಸಿ ಅವರಿಂದ ಸ್ವೀಕೃತಿ ಪಡೆದುಕೊಳ್ಳಲು ಸೂಚಿಸಿದರು.

ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಸಹಾಯಕ ಚುನಾವಣಾಧಿಕಾರಿ ರೇಖಾ ಡೊಳ್ಳಿನವರ, ತಹಶೀಲ್ದಾರ ಬಲರಾಮ ಕಟ್ಟಿಮನಿ, ತಾಪಂ ಇಒ ಟಿ.ಆರ್. ಮಲ್ಲಾಡದ, ಕಂದಾಯ ನೀರಿಕ್ಷಕ ಎಂ.ಬಿ.ಸಾರಾಪೂರಿ, ಪಿಡಿಒ ಸಿ.ಸಿ.ಮುತ್ತೂರು, ಕಾರ್ಯದರ್ಶಿ ಬಿ.ಎ. ಓಂಕಾರ, ಗ್ರಾಮ ಆಡಳಿತ ಅಧಿಕಾರಿ ಆರ್.ಆರ್.ಹುಡೇದ, ಐಇಸಿ ಸಂಂ–ಯೋಜಕ ಮಹಾಂತೇಶ ಬಾದವನಮಠ ಮತ್ತಿತರರು ಉಪಸ್ಥಿತರಿದ್ದರು.

## ಮಂಗಳವಾರ ಮೂಡಲಗಿಯಲ್ಲಿ ಹೆಬ್ಬಾಳಕರ್ ಪರ ಪ್ರಚಾರ



ಮೂಡಲಗಿ : ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ ಪರ ಮತಯಾಚನೆ ಸಲುವಾಗಿ ಏ.23ರಂದು ಅರಭಾವಿ ಮತಕ್ಷೇತ್ರ ವ್ಯಾಪ್ತಿಯ ವಿವಿಧೆಡೆ ಸಮಾವೇಶ ನಡೆಯಲಿದೆ.

ಕಾಂಗ್ರೆಸ್ ಮುಖಂಡ ಅನೀಲಕುಮಾರ ದಳವಾಯಿ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದರು. ದುರದುಂಡಿ, ರಾಜಾಪೂರ, ಶಿವಾಪೂರ, ಮುನ್ಯಾಳ, ಧರ್ಮಟ್ಟಿ, ಸುಣಧೋಳಿ ಗ್ರಾಮಗಳಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಸಮಾವೇಶ ಜರುಗುವುದು. ನಂತರ ಸಂಜೆ ಮೂಡಲಗಿ ಪಟ್ಟಣದಲ್ಲಿ ಬೃಹತ್ ರ್ಯಾಲಿ ಮೂಲಕ ಬಸವರಂಗ ಮಂಟಪದವರೆಗೂ ತಲುಪಿ, ಮಂಟಪದ ವೇದಿಕೆಯಲ್ಲಿ ಬೃಹತ್ ಸಮಾವೇಶ ಜರುಗುವುದು ಎಂದು ಅವರು ಹೇಳಿದರು.

ಈಗಾಗಲೇ ಅರಭಾವಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಪ್ರಚಾರ ಕಾರ್ಯ ಪ್ರಾರಂಭಿಸಲಾಗಿದ್ದು, 2ನೇ ಹಂತದ ಪ್ರಚಾರ ಕಾರ್ಯದಲ್ಲಿ ಸಚಿವ ಸತೀಶ ಜಾರಕಿಹೊಳಿ, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ, ಶಾಸಕ ಲಕ್ಷ್ಮಣ ಸವದಿ ಅವರು ಭಾಗವಹಿಸಲಿದ್ದಾರೆ. ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ ಪರ ಮತಯಾಚನೆ ಮಾಡಲಿದ್ದು ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕೋರಿದರು.

ಕಾಂಗ್ರೆಸ್ ಮುಖಂಡರಾದ ಎಸ್. ಎಸ್. ಸೋನವಾಲ್ಕರ, ವಿ.ಪಿ. ನಾಯಕ್, ಬಿ.ಬಿ. ಹಂದಿಗುಂದ, ರಮೇಶ ಉಟಗಿ ಮಾತನಾಡಿ, ಈಗಾಗಲೇ ರಾಜ್ಯ ಸರ್ಕಾರ ಕರ್ನಾಟಕದ ಜನತೆಗೆ ಕೊಟ್ಟತಂಹ ಮಾತಿನಂತೆ 5 ಗ್ಯಾರಂಟಿಗಳನ್ನು ಈಡೇರಿಸಿ ಕೊಟ್ಟತಂಹ ಮಾತು ಉಳಿಸಿಕೊಂಡಿದ್ದು, ಕೇಂದ್ರದಲ್ಲಿಯೂ ಸಹ 25 ಗ್ಯಾರಂಟಿಗಳನ್ನು ಘೋಷಣೆ ಮಾಡಿದ್ದು ಆದರಿಂದ ಈ ಬಾರಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಆಗುವುದು ಖಚಿತ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ ಮುಖಂಡರಾದ ಬಿ ಕೆ ಶಿವಕುಮಾರ, ಸುಭಾಷ ಪೂಜೇರಿ, ಕೆ ಟಿ ಗಾಣಿಗೇರ, ಸಲೀಂ ಇಮ್ಮಾದಾರ, ರವಿ ಮೂಡಲಗಿ, ಸುರೇಶ ಮಗದುಮ್ಮ, ಸಂಗಮೇಶ ಕೌಜಲಗಿ, ಹಾಗೂ ಕಾಂಗ್ರೆಸ ಕಾರ್ಯಕರ್ತರು ಉಪಸ್ಥಿತ–ರಿದ್ದರು.

## 4 ತಿಂಗಳಲ್ಲಿ ಜೈತನಮಾಳ ಸಮಗ್ರ ಅಭಿವೃದ್ಧಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್
### ಬೆಳಗಾವಿ ದಕ್ಷಿಣ ಕ್ಷೇತ್ರದಲ್ಲಿ ಸಚಿವರಿಂದ ಮತ ಸಂಚಾರ; ಅದ್ದೂರಿಯಾಗಿ ಸ್ವಾಗತಿಸಿದ ನಾಗರಿಕರು

ಬೆಳಗಾವಿ: ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಜಯ ದಾಖಲಿಸಿದರೆ ಜೈತನಮಾಳವನ್ನು ದತ್ತು ಸ್ವೀಕರಿಸಿ, ಸಮಗ್ರವಾಗಿ ಅಭಿವೃದ್ಧಿ ಮಾಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಜೈತನ್ ಮಾಳದಲ್ಲಿ ಚುನಾವಣಾ ಪ್ರಚಾರ ನಡೆಸಿದ ಸಚಿವರು, ಇಲ್ಲಿರುವ ಅವ್ಯವಸ್ಥೆ ನೋಡಿ ನಿಜಕ್ಕೂ ಬೇಸರ ಉಂಟಾಯಿತು. ಕನಿಷ್ಠ ಮೂಲಭೂತ ಸೌಕರ್ಯಗಳನ್ನೂ ಒದಗಿಸಲು ಈ ಭಾಗದ ಜನಪ್ರತಿನಿಧಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿದರು.



ಜೈತನ್ ಮಾಳ ಜನರು ಎದು–ರಿಸುತ್ತಿರುವ ಮೂಲಭೂತ ಸೌಕರ್ಯಗಳ ಕೊರತೆ ನೋಡಿ ಮರುಕ ಉಂಟಾಯಿತು. ಮೃಣಾಲ್ ಹೆಬ್ಬಾಳ್ಕರ್ ಆರಿಸಿ ಬಂದರೆ ಕೇವಲ ನಾಲ್ಕು ತಿಂಗಳಲ್ಲಿ ಅಭಿವೃದ್ಧಿ ಮಾಡಲಾಗುವುದು. ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಅವರನ್ನು ಬೆಂಬಲಿಸಬೇಕು ಎಂದು ಸಚಿವರು ಮನವಿ ಮಾಡಿದರು.

**ಜುನೆ ಬೆಳಗಾವಿಯಲ್ಲಿ ಅದ್ದೂರಿ ಸ್ವಾಗತ:**

ಬಳಿಕ ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಜುನೆ (ಹಳೇ) ಬೆಳಗಾವಿಯಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪ್ರಚಾರ ನಡೆಸಿದರು. ಸ್ಥಳೀಯ ಮಹಿಳೆಯರು ಆರತಿ ಬೆಳಗಿ ಸಚಿವರನ್ನು ಸ್ವಾಗತಿಸಿದರು. ಹಳೇ ಬೆಳಗಾವಿ ನಾಕಾದಿಂದ ಕಲ್ಲಪ್ಪ ದೇವಸ್ಥಾನದವರೆಗೆ ಸಚಿವರೊಂದಿಗೆ ನೂರಾರು ಮಹಿಳೆಯರು ಹೆಜ್ಜೆ ಹಾಕಿದರು. ಚೌಡಿಗಲ್ಲಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಜೊತೆಗೂಡಿ ಸಚಿವರು ಪ್ರಚಾರ ನಡೆಸಿದರು.

ಈ ವೇಳೆ ದೇವದಾಸ್ ಕನ್ನುಕರ್, ಕಾರ್ಪೋರೇಟರ್ ಲಕ್ಷ್ಮೀ ಲೋಕರೆ, ಮಲ್ಲಸರ್ಜ ಪಾಟೀಲ್,ತುಕರಾಮ್ ಹೊಸುರಕರ, ನೈ.ವೈ.ಕನ್ನುಕರ್, ಡಾ.ಸುಕೀರ್ತ್ ನಾರಾಯಣ್ ಭಂಡಾರಿ, ಮಾಧುರಿ ಜಾಧವ್, ಮುತ್ತುರಾಜ್, ನಾಗಪ್ಪ, ಯಲ್ಲಪ್ಪ ಗುಜನಾಳ, ಚಂದ್ರು, ಶಬ್ಬೀರ್, ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

## ವಿದ್ಯಾರ್ಥಿ ನಾಪತ್ತೆ



ಬೆಳಗಾವಿ: ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಮುಗಳಖೋಡ ಗ್ರಾಮದ ಸಂತೋಷ ತಮ್ಮಾಣ್ಣಿ ಗೊಳಸಂಗಿ 9 ತರಗತಿಯ ವಿದ್ಯಾರ್ಥಿಯು (ಬಾಲಕ) ಏ.13 ರಂದು ಉಣ್ಣಿಬಸವನ ದೇವಸ್ಥಾನದ ಹತ್ತಿರದ, ಹಾರೂಗೇರಿ ಧಾರವಾಡ ಪಾಠ ಶಾಲೆಯ ಬೇಸಿಗೆ ಶಿಬಿರದಿಂದ ಯಾರಿಗೂ ಹೇಳದೇ ಕೇಳದೇ ಎಲ್ಲಿಯೊ ಹೋಗಿ ಕಾಣೆಯಾಗಿರುತ್ತಾನೆ ಎಂದು ಕಾಣೆಯಾದ ವಿದ್ಯಾರ್ಥಿ ತಂದೆ ತಮ್ಮಾಣ್ಣಿ ಗೊಳಸಂಗಿ ಅವರು ಹಾರೂಗೇರಿ ಪೊಲೀಸ್ ಠಾಣೆಗೆ ದೂರ ದಾಖಲಿಸಿದ್ದಾರೆ.

ಕಾಣೆಯಾದ ವಿದ್ಯಾರ್ಥಿ ಚಹರೆ: ವಯಸ್ಸು 16 ಇದ್ದು, 5 ಪೂಟ 4 ಇಂಚು ಎತ್ತರ, ಗೋದಿ ಮೈ ಬಣ್ಣ, ಕೋಲು ಮುಖ, ಉದ್ದ ಮೂಗು, ಶಾಲೆಯಿಂದ ಹೋಗುವಾಗ ಗುಲಾಬಿ ಬಣ್ಣದ ಟಿ–ಶರ್ಟ್ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ.

ಸದರಿ ಕಾಣೆಯಾದ ವಿದ್ಯಾರ್ಥಿ ಮಾಹಿತಿ ದೊರಕಿದಲ್ಲಿ ದೂ.9008060289 ಸಂಖ್ಯೆಗೆ ಸಂಪರ್ಕಿಸಬೇಕು ಎಂದು ಹಾರೂಗೇರಿ ಪೊಲೀಸ್ ಠಾಣೆ ಪಿ.ಎಸ್.ಐ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉದ್ಯೋಗ ಒದಗಿಸುವಲ್ಲಿ ಕಾಗ್ನಿಜೆಂಟ್ ಭಾರತದಲ್ಲೇ ಅತ್ಯುತ್ತಮ ಕಂಪನಿ ಎಂಬ ಗರಿಮೆ: ಲಿಂಕ್ಡ್‌ಇನ್‌ನಿಂದ ಪುರಸ್ಕಾರ
### ಕೌಶಲ್ಯ ತರಬೇತಿ, ಬೆಳವಣಿಗೆಯ ಅವಕಾಶಗಳು ಮತ್ತು ಪ್ರಮುಖ ಭಿನ್ನತೆಗಳಲ್ಲಿ ಲಿಂಗ ವೈವಿಧ್ಯತೆ, ಅತ್ಯುತ್ತಮ ಕೆಲಸದ ಸ್ಥಳ ವಿಭಾಗದಲ್ಲಿ 3ನೇ ಸ್ಥಾನ ಪಡೆದುಕೊಂಡ ಕಾಗ್ನಿಜೆಂಟ್ ಕಂಪನಿ

ಏಪ್ರಿಲ್: ಪ್ರತಿಷ್ಠಿತ ಲಿಂಕ್ಡ್‌ಇನ್ ಸಂಸ್ಥೆ ಬಿಡುಗಡೆ ಮಾಡಿದ 2024ರ ಟಾಪ್ 25 ಕಂಪನಿಗಳ ಪಟ್ಟಿಯಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಜಾಗತಿಕವಾಗಿ ಗುರುತಿಸಿಕೊಂಡಿರುವ ಕಾಗ್ನಿಜೆಂಟ್ ಕಂಪನಿಯು 3ನೇ ರ್ಯಾಂಕಿಂಗ್ ಪಡೆದುಕೊಂಡಿದೆ. ದೇಶಾದ್ಯಂತ ಕಾಗ್ನಿಜೆಂಟ್ ಬೃಹತ್ ಪ್ರಮಾಣದಲ್ಲಿ ಉದ್ಯೋಗಿಗಳನ್ನು ಒಳಗೊಂಡಿದ್ದು, ಕೌಶಲ್ಯ ಒದಗಿಸುವುದು, ವೃತ್ತಿ ಬೆಳವಣಿಗೆಗೆ ಅನುಕೂಲವಾಗುವಂತೆ ಮತ್ತು ಲಿಂಗ ವೈವಿಧ್ಯತೆಯನ್ನು ಉತ್ತೇಜಿಸಲು ಕಾಗ್ನಿಜೆಂಟ್‌ನ ಬದ್ಧತೆಯನ್ನು ಗುರುತಿಸಲಾಗಿದೆ.

"ಈ ಪುರಸ್ಕಾರವು ಕಾಗ್ನಿಜೆಂಟ್‌ನ ಯಶಸ್ಸಿನ ಹೃದಯಭಾಗದಲ್ಲಿರುವ ನಮ್ಮ ಸಹವರ್ತಿಗಳಿಗೆ ಇನ್ನಷ್ಟು ಉತ್ತೇಜನ ನೀಡುತ್ತದೆ ಎಂದು ಕಾಗ್ನಿಜೆಂಟ್‌ನ ಸಿಇಒ ರವಿ ಕುಮಾರ್ ಎಸ್ ಹೇಳಿದರು. ಕಾಗ್ನಿಜೆಂಟ್ ನಲ್ಲಿ ಕೆಲಸ ಮಾಡುವ ಪ್ರತಿಯೊಬ್ಬರು ಈ ಸಂಸ್ಥೆಯ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಭಾರತಾದ್ಯಂತ ನಮ್ಮ ತಂಡಗಳು ಕೌಶಲ್ಯ ತರಬೇತಿ, ನಾವೀನ್ಯತೆಗೆ ಹೆಚ್ಚಿನ ಅವಕಾಶವನ್ನು ಒದಗಿಸುತ್ತಿದ್ದು, ಉದ್ಯೋಗಿಗಳಿಗೆ ನಾವಿನ್ಯತೆಯ ತರಬೇತಿ ನೀಡುವಲ್ಲಿ ನಮ್ಮ ಬದ್ಧತೆಯನ್ನು ಎತ್ತಿ ತೋ–ರಿಸಿದ್ದೇವೆ.

ಒಟ್ಟಾಗಿ, ನಾವು ಕೇವಲ ವೃತ್ತಿಜೀವನವನ್ನು ರೂಪಿಸುತ್ತಿಲ್ಲ; ನಾವು ಭವಿಷ್ಯವನ್ನು ರೂಪಿಸುತ್ತಿದ್ದೇವೆ."ಲಿಂಕ್ಡ್‌ಇನ್ ವೃತ್ತಿಜೀವನದ ಪ್ರಗತಿಯ ಎಂಟು ಸ್ತಂಭಗಳ ಆಧಾರದ ಮೇಲೆ ಭಾರತದಲ್ಲಿ ಅಗ್ರ 25 ಕಂಪನಿಗಳನ್ನು ಶ್ರೇಣೀಕರಿಸಿದೆ: ಮುನ್ನಡೆಯುವ ಸಾಮರ್ಥ್ಯ; ಕೌಶಲ್ಯಗಳ ಬೆಳವಣಿಗೆ; ಕಂಪನಿಯ ಸ್ಥಿರತೆ; ಬಾಹ್ಯ ಅವಕಾಶ; ಕಂಪನಿ ಬಾಂಧವ್ಯ; ಲಿಂಗ ವೈವಿಧ್ಯತೆ; ದೇಶದಲ್ಲಿ ಶೈಕ್ಷಣಿಕ ಹಿನ್ನೆಲೆ ಮತ್ತು ಉದ್ಯೋಗಿ ಉಪಸ್ಥಿತಿ ಈ ಎಲ್ಲಾ ಕ್ಷೇತ್ರದಲ್ಲೂ ನಮ್ಮ ಸಂಸ್ಥೆ ಹೆಚ್ಚು ಶ್ರಮದೊಂದಿಗೆ ತನ್ನ ಬದ್ಧತೆಯನ್ನು ಹಿಡಿದಿಟ್ಟುಕೊಂಡಿರುವುದು ಹೆಮ್ಮೆಯ ವಿಚಾರ ಎಂದರು.

ಜ್ಞಾನ–ಸಮೃದ್ಧ ಕಂಪನಿಯಾಗಿ, ಕಾಗ್ನಿಜೆಂಟ್ ಉದ್ಯಮದ ಅತ್ಯಂತ ಸಮಗ್ರವಾದ ಡಿಜಿಟಲ್ ಕಲಿಕೆ ಮತ್ತು ಅಭಿವೃದ್ಧಿ ಪರಿಸರ ವ್ಯವಸ್ಥೆಗಳಲ್ಲಿ ಒಂದನ್ನು ನಿರ್ಮಿಸಿದೆ. ಭವಿಷ್ಯದ–ಸಿದ್ಧ ತಂತ್ರಜ್ಞಾನಗಳಲ್ಲಿ ಸಹವರ್ತಿಗಳನ್ನು ಹೆಚ್ಚಿಸಲು ಸಂಪನ್ಮೂಲಗಳನ್ನು ನಿರ್ಮಿಸಿದೆ. ಕಂಪನಿಯ ಮೀಸಲಾದ ತಜ್ಞರು ವಿಶ್ವದ ಪ್ರಮುಖ ಶೈಕ್ಷಣಿಕ ಮತ್ತು ತಂತ್ರಜ್ಞಾನ ಪಾಲುದಾರರೊಂದಿಗೆ ಸಹಕರಿಸುತ್ತಾರೆ ಮತ್ತು ಎಲ್ಲಿಂದಲಾದರೂ ಕಲಿಕೆಯ ವೇದಿಕೆಗಳ ಪ್ರವೇಶವನ್ನು ಮೇಲ್ವಿಚಾರಣೆ ಮಾಡುತ್ತಾರೆ.

ಕಳೆದ ವರ್ಷ, ಕಾಗ್ನಿಜೆಂಟ್‌ನ ಜಾಗತಿಕ ಕಾರ್ಯಪಡೆಯ ಶೇ.90 ಕೌಶಲ್ಯ ವರ್ಧನೆಯ ಉಪಕ್ರಮಗಳಲ್ಲಿ ಭಾಗವಹಿಸಿದರು, 270,000 ಸಹವರ್ತಿಗಳು ಹೊಸ ಕೌಶಲ್ಯ ಮತ್ತು ಪ್ರಾವೀಣ್ಯತೆಗಳನ್ನು ಪಡೆದುಕೊಂಡರು, 88,000 ಎಐ ಮತ್ತು ಜನರೇಟಿವ್ ಎಐ ಕೋರ್ಸ್‌ಗಳನ್ನು ಪೂರ್ಣಗೊಳಿಸಿದರು.



ಹೆಚ್ಚುವರಿಯಾಗಿ, ಕಂಪನಿಯು ವೃತ್ತಿ ಬೆಳವಣಿಗೆಯ ಕಾರ್ಯಕ್ರಮಗಳನ್ನು ಜಾ–ರಿಗೊಳಿಸಿತು ಮತ್ತು ವಿವಿಧ ಹುದ್ದೆಯಲ್ಲಿ ಸುಮಾರು 30,000 ಉದ್ಯೋಗಿಗಳಿಗೆ ಬಡ್ತಿ ನೀಡಲಾಯಿತು.

ಅತ್ಯಾಧುನಿಕ ತಂತ್ರಜ್ಞಾನ ಮತ್ತು ಉಜಟಿ ಎಐ ಕೌಶಲ್ಯಗಳೊಂದಿಗೆ ಒಂದು ಮಿಲಿಯನ್‌ಗಿಂತಲೂ ಹೆಚ್ಚು ವ್ಯಕ್ತಿಗಳನ್ನು ಸಬಲೀಕರಣಗೊಳಿಸುವ ಗುರಿಯೊಂದಿಗೆ ಕಾಗ್ನಿಜೆಂಟ್–ಸಿನಾಪ್ಸ್ ಅನ್ನು ಸಹ ಪ್ರಾರಂಭಿಸಿದೆ.

ಸರ್ಕಾರಗಳು, ಶೈಕ್ಷಣಿಕ ಸಂಸ್ಥೆಗಳು, ವ್ಯವಹಾರಗಳು ಮತ್ತು ಇತರ ಕಾರ್ಯತಂತ್ರದ ಪಾಲುದಾರರೊಂದಿಗೆ, ಕಾಗ್ನಿಜೆಂಟ್‌ನ ಕಾರ್ಯಕ್ರಮವು ಭವಿಷ್ಯದ ಉದ್ಯೋಗಿಗಳಿಗೆ ವ್ಯಕ್ತಿಗಳನ್ನು ಸಿದ್ಧಪಡಿಸುತ್ತದೆ.

ಅದರ ತಂಡಗಳ ಪ್ರಮಾಣ ಮತ್ತು ವೈವಿಧ್ಯತೆಯ ಲಾಭ ಪಡೆಯಲು, ಸಹವರ್ತಿಗಳ ನಡುವೆ ಹೊಸತನವನ್ನು ಹೆಚ್ಚಿಸಲು, ಕಾಗ್ನಿಜೆಂಟ್ 2023 ರಲ್ಲಿ ಬ್ಲೂಬೋಲ್ಟ್ ಅನ್ನು ಪ್ರಾರಂಭಿಸಿತು. ಈ ತಳಮಟ್ಟದ ನಾವೀನ್ಯತೆ ಕಾರ್ಯಕ್ರಮವು ಶೀರ್ಷಿಕೆಗಳು ಅಥವಾ ಪಾತ್ರಗಳನ್ನು ಲೆಕ್ಕಿಸದೆ ಎಲ್ಲಾ ಸಹವರ್ತಿಗಳನ್ನು ತಮ್ಮ ಉತ್ತಮ ಆಲೋಚನೆಗಳನ್ನು ತರಲು, ಯಥಾಸ್ಥಿತಿಗೆ ಸವಾಲು ಹಾಕಲು, ಗ್ರಾಹಕರಿಗೆ ಹೊಸತನವನ್ನು ನೀಡಲು ಆಹ್ವಾನಿಸುತ್ತದೆ. ಪ್ರೋಗ್ರಾಂ ಪ್ರಾರಂಭವಾದ ಒಂಬತ್ತು ತಿಂಗಳೊಳಗೆ, 100,000 ಕ್ಕೂ ಹೆಚ್ಚು ಆಲೋಚನೆಗಳನ್ನು ರಚಿಸಲಾಗಿದೆ, 21,000 ಈಗಾಗಲೇ ಗ್ರಾಹಕರೊಂದಿಗೆ ಅಳವಡಿಸಲಾಗಿದೆ, ಅವರ ವ್ಯವಹಾರಕ್ಕೆ ನೈಜ ಮೌಲ್ಯವನ್ನು ತರುತ್ತದೆ.

ವೈವಿಧ್ಯಮಯ ಮತ್ತು ಅಂತರ್ಗತ ಕಾರ್ಯಪಡೆಯು ಗ್ರಾಹಕರ ಅಗತ್ಯಗಳನ್ನು ಆವಿಷ್ಕರಿಸುವ ಮತ್ತು ಪ್ರತಿಬಿಂಬಿಸುವ ಸಾಮರ್ಥ್ಯವನ್ನು ಬಲಪಡಿಸುತ್ತದೆ ಎಂದು ಕಾಗ್ನಿಜೆಂಟ್ ನಂಬುತ್ತದೆ. ಭಾರತದಲ್ಲಿ, ಕಾಗ್ನಿಜೆಂಟ್‌ನ ಸುಮಾರು 40% ಉದ್ಯೋಗಿಗಳನ್ನು ಮಹಿಳೆಯರು ಒಳಗೊಂಡಿದ್ದಾರೆ, ಐಟಿ ಉದ್ಯಮದ ಲಿಂಗ ವೈವಿಧ್ಯತೆಯ ಸರಾಸರಿ 36% ಅನ್ನು ಮೀ–ರಿಸಿದ್ದಾರೆ ಮತ್ತು ಭಾರತದಲ್ಲಿ ಅದರ ಎರಡು ದೊಡ್ಡ ಕೇಂದ್ರಗಳು ಮಹಿಳಾ ನಾಯಕರ ನೇತೃತ್ವದಲ್ಲಿದೆ. ಹೆಚ್ಚಿನ ಮಹಿಳೆಯರು ತಮ್ಮ ಸಂಪೂರ್ಣ ಸಾಮರ್ಥ್ಯವನ್ನು ತಲುಪಲು ಕಳೆದ ವರ್ಷ, ಕಾಗ್ನಿಜೆಂಟ್ ಮಹಿಳಾ ಕೇಂದ್ರಿತ ಕಾರ್ಯಕ್ರಮಗಳು ಮತ್ತು ತಂತ್ರಜ್ಞಾನದಲ್ಲಿ ಮಹಿಳಾ ನಾಯಕತ್ವವನ್ನು ಮುನ್ನಡೆಸಲು ವಿನ್ಯಾಸಗೊಳಿಸಿದ ನೀತಿಗಳ ಏಕೀಕೃತ ಚೌಕಟ್ಟನ್ನು ಶಕ್ತಿ ಪ್ರಾರಂಭಿಸಿತು.

ಅಠಂಟುದಚಟಿಣ ಬೆಂಗಳೂರು, ಭುವನೇಶ್ವರ, ಚೆನ್ನೈ, ಕೊಯಮತ್ತೂರು, ದೆಹಲಿ–ಓಅಖ, ಹೈದರಾಬಾದ್, ಇಂದೋರ್, ಕೊಚ್ಚಿ, ಕೋಲ್ಕತ್ತಾ, ಮಂಗಳೂರು, ಮುಂಬೈ ಮತ್ತು ಪುಣೆ ಸೇರಿದಂತೆ ಭಾರತದಾದ್ಯಂತ ವ್ಯಾಪಕವಾದ ಸೌಲಭ್ಯಗಳ ಜಾಲವನ್ನು ಹೊಂದಿದೆ.

ಕಂಪನಿಯು 347,700 ಜಾಗತಿ–ಕ ಉದ್ಯೋಗಿಗಳನ್ನು ಹೊಂದಿದೆ ಮತ್ತು ಈ ಸಹವರ್ತಿಗಳಲ್ಲಿ 70% ಕ್ಕಿಂತ ಹೆಚ್ಚು ಭಾರತದಲ್ಲಿ ನೆಲೆಗೊಂಡಿದೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089